ಸಂಪುಟ : 9 ಸಂಚಿಕೆ 96 ಪುಟ : 4 ಬೆಲೆ: 3.00 ಶುಕ್ರವಾರ ಮೇ 17 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 96 Pages : 4 Price : 3.00 Friday May 17 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಿಮ್ಸ್ ನಿರ್ದೇಶಕರಿಂದ ಸ್ಪಷ್ಟನೆ

## ನೀರಿನ ಸಮಸ್ಯೆಯಿಂದ ರಜೆ ನೀಡಿಲ್ಲ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಸಂಸ್ಥೆಯ ಬೋಧಕ ಆಸ್ಪತ್ರೆ ಹಾಗೂ ವಿದ್ಯಾರ್ಥಿಗಳ ವಸತಿ ನಿಲಯಕ್ಕೆ ತುಂಗಭದ್ರಾ ನದಿಯಿಂದ ನೀರು ಬರುತ್ತಿಲ್ಲ. ಆದರೆ ಬೋರ್‌ವೆಲ್‌ನಿಂದ 24*7 ನೀರು ಸರಬರಾಜು ಮಾಡಲಾಗುತ್ತಿದೆ.

ವಿದ್ಯಾರ್ಥಿಗಳ ಕೆಲವೊಂದು ಬ್ಯಾಚಿನ ಆಂತರಿಕ ಪರೀಕ್ಷೆಗಳು ಮುಕ್ತಾಯಗೊಂಡಿದ್ದು, ಆ ಬ್ಯಾಚಿನ ವಿದ್ಯಾರ್ಥಿಗಳು ತಮ್ಮ ಊರಿಗೆ ತೆರಳಿದ್ದಾರೆ. ಮೇ. 20ರಂದು ಮರಳಿ ಮಹಾವಿದ್ಯಾಲಯಕ್ಕೆ, ತರಗತಿಗಳಿಗೆ ಹಾಜರಾಗುತ್ತಾರೆ. ಸಂಸ್ಥೆಯಿಂದ ವಿದ್ಯಾರ್ಥಿಗಳಿಗೆ ನೀರಿನ ಸಮಸ್ಯೆಯಿಂದ ಯಾವುದೇ ತರಹದ ರಜೆಯನ್ನು ನೀಡಿಲ್ಲ. ಪ್ರಸ್ತುತ 800 ವಿದ್ಯಾರ್ಥಿಗಳು ಮಹಾವಿದ್ಯಾಲಯದ ವಸತಿ ನಿಲಯದಲ್ಲಿದ್ದಾರೆ. ವಿದ್ಯಾರ್ಥಿಗಳು ದೈನಂದಿನ ತರಗತಿಗಳಿಗೆ ಹಾಗೂ ಆಸ್ಪತ್ರೆಯ ಕಾರ್ಯಗಳಿಗೆ ತೆರಳುತ್ತಿದ್ದಾರೆ. ವಿದ್ಯಾರ್ಥಿಗಳಿಗೆ ಮತ್ತು ರೋಗಿಗಳಿಗೆ ಸಂಸ್ಥೆಯಿಂದ ಸಮರ್ಪಕವಾಗಿ ನೀರಿನ ವ್ಯವಸ್ಥೆ ಮಾಡಲಾಗಿದ್ದು, ನೀರನ್ನು ಮಿತವಾಗಿ ಬಳಸಲು ಎಲ್ಲರಿಗೂ ಸೂಚಿಸಿದೆ. ಜಿಮ್ಸ್ ಸಂಸ್ಥೆಯಲ್ಲಿ ಬಳಕೆಯಾದ ನೀರನ್ನು ಉದ್ಯಾನವನ ಹಾಗೂ ಸಂಸ್ಥೆಯಲ್ಲಿ ಮರಗಳನ್ನು ಬೆಳೆಸಲು 2016ರಿಂದಲೂ ವ್ಯವಸ್ಥೆ ಕಲ್ಪಿಸಲಾಗಿದೆ ಹಾಗೂ ನೀರಿನ ಸದ್ಬಳಕೆಯಲ್ಲಿ ಜಿಮ್ಸ್ ಮಾದರಿಯಾಗಿದೆ ಎಂದು ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯ ರೈತ ಬಾಂಧವರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

2023-24ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಜಿಲ್ಲೆಯ 1,13,328 ರೈತ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ನೇರವಾಗಿ 9 ಹಂತಗಳಲ್ಲಿ ಸರ್ಕಾರದಿಂದ ಜಮೆ ಮಾಡಲಾಗಿದೆ.

ಈಗಾಗಲೇ ಜಮೆ ಆದ ರೈತ ಫಲಾನುಭವಿಗಳಿಗೆ ಪರಿಹಾರದ ಬಾಕಿ ಮೊತ್ತವನ್ನು ಜಮೆ ಮಾಡುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ. ಕಾರಣ, ಜಿಲ್ಲೆಯಲ್ಲಿ ಯಾವ ರೈತರಿಗೆ ಮೊದಲನೇ ಹಂತದ ಬರ ಪರಿಹಾರದ ಮೊತ್ತವು ಈವರೆಗೂ ಜಮೆ ಆಗಿರುವುದಿಲ್ಲವೋ ಅವರು ಜಿಲ್ಲಾಧಿಕಾರಿಗಳ, ಉಪವಿಭಾಗಾಧಿಕಾರಿಗಳ, ತಹಸೀಲ್ದಾರರ ಕಾರ್ಯಾಲಯಗಳಲ್ಲಿ ತೆರೆಯಲಾದ ಹೆಲ್ಪ್‌ಡೆಸ್ಕ್‌ಗೆ ಸಂಪರ್ಕಿಸಿ ತಮ್ಮ ಅಹವಾಲುಗಳನ್ನು ಸಲ್ಲಿಸಲು ಕೋರಿದೆ.

ಸಾರ್ವಜನಿಕರು ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆಗಳ ವಿವರ: ಜಿಲ್ಲಾಧಿಕಾರಿಗಳ ಕಛೇರಿ-08372-239177, ಉಪ ವಿಭಾಗಾಧಿಕಾರಿಗಳ ಕಚೇರಿ-08372-238506, ಗದಗ ತಹಸೀಲ್ದಾರರ ಕಛೇರಿ-08372-250009, ಗಜೇಂದ್ರಗಡ ತಹಸೀಲ್ದಾರ ಕಛೇರಿ-08381-298982, ಲಕ್ಷ್ಮೇಶ್ವರ ತಹಸೀಲ್ದಾರ ಕಛೇರಿ-08487-273273, ಮುಂಡರಗಿ ತಹಸೀಲ್ದಾರ ಕಛೇರಿ-08371-262237, ನರಗುಂದ ತಹಸೀಲ್ದಾರ ಕಛೇರಿ-08377-245243, ರೋಣ ತಹಸೀಲ್ದಾರ ಕಛೇರಿ-08381-267239, ಶಿರಹಟ್ಟಿ ತಹಶೀಲ್ದಾರ ಕಛೇರಿ-08487-242100.

ರೈತ ಸಂಪರ್ಕ ಕೇಂದ್ರದ ದೂರವಾಣಿ ಸಂಖ್ಯೆಗಳು: ವೀರಣ್ಣಿ ಗಡಾದ, ಕೃಷಿ ಅಧಿಕಾರಿ-ಬೇಟಗೇರಿ-8277931419, ರಾಜೇಶ್ವರಿ, ಕೃಷಿ ಅಧಿಕಾರಿ- ಹುಲಕೋಟಿ-8088648862, ಸಿ.ಕೆ. ಕಮ್ಮಾರ, ಕೃಷಿ ಅಧಿಕಾರಿ-ನರೇಗಲ್ಲ -9741541037, ಚಂದ್ರಶೇಖರಗೌಡ, ಕೃಷಿ ಅಧಿಕಾರಿ-ಲಕ್ಷ್ಮೇಶ್ವರ-8277931462, ವಿರೇಶ ನಾಗಭೂಷಣ, ಕೃಷಿ ಅಧಿಕಾರಿ-ಮುಂಡರಗಿ-8277931430, ಎಸ್.ಬಿ. ರಾಮೇನಹಳ್ಳಿ, ಕೃಷಿ ಅಧಿಕಾರಿ-ಡಂಬಳ-948172620, ಶಿವಶಂಕರಪ್ಪ, ಕೃಷಿ ಅಧಿಕಾರಿ-ನರಗುಂದ-8277931443, ನವೀನಕುಮಾರ, ಕೃಷಿ ಅಧಿಕಾರಿ-ಕೊಣ್ಣೂರು-8277931442, ಸಾವಿತ್ರಿ ಶಿವನಗೌಡ್ರ, ಕೃಷಿ ಅಧಿಕಾರಿ-ಹೊಳೆ ಆಲೂರು-8277931454, ಎಸ್.ಆರ್. ದೊಡ್ಡಮನಿ, ಕೃಷಿ ಅಧಿಕಾರಿ-ರೋಣ -8277931413, ಎಸ್.ಬಿ. ಲಮಾಣಿ, ಕೃಷಿ ಅಧಿಕಾರಿ-ಶಿರಹಟ್ಟಿ-8277931467.

### ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಹರಿಹಾಯ್ದ ಬಸವರಾಜ ಬೊಮ್ಮಾಯಿ

# ಅಂಜಲಿ ಕೊಲೆಗೆ ಪೊಲೀಸರೇ ಕಾರಣ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಂಜಲಿ ಕೊಲೆ ಬೆದರಿಕೆ ದೂರು ನೀಡಿದ್ದರೂ ಆರೋಪಿಯನ್ನು ಬಂಧಿಸದೇ ಪೊಲೀಸರು ಪರೋಕ್ಷವಾಗಿ ಅಂಜಲಿ ಕೊಲೆಗೆ ಕಾರಣರಾಗಿದ್ದಾರೆ. ರಾಜ್ಯದಲ್ಲಿ ಪೊಲೀಸರನ್ನು ರಾಜಕೀಯ ವಿರೋಧಿಗಳ ದಮನಕ್ಕಾಗಿ ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದರು.



ಗದುಗಿನಲ್ಲಿ ಗುರುವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹುಬ್ಬಳ್ಳಿ ನೇಹಾ ಹಾಗೂ ಅಂಜಲಿ ಹತ್ಯೆ ಪ್ರಕರಣದ ಕುರಿತು ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದರು. ಈ ಪ್ರಕರಣದಲ್ಲಿ ಸಂಪೂರ್ಣವಾಗಿ ಪೊಲೀಸರ ವೈಫಲ್ಯವಿದೆ. ನೇಹಾಳ ಮಾದರಿಯಲ್ಲಿಯೇ ಕೊಲೆ ಮಾಡುವುದಾಗಿ ಆರೋಪಿ ಹೇಳಿದ್ದಾನೆ. ಈ ಬಗ್ಗೆ ಅಂಜಲಿ ಮನೆಯವರು ದೂರನ್ನೂ ನೀಡಿದ್ದಾರೆ. ಪೊಲೀಸರು ಆರೋಪಿಯನ್ನು ಬಂಧಿಸಿದ್ದರೆ ಈ ಕೊಲೆಯನ್ನು ತಪ್ಪಿಸಬಹುದಿತ್ತು. ಈ ಕೊಲೆಗೆ ಪರೋಕ್ಷವಾಗಿ ಪೊಲೀಸರು ಕಾರಣರಾಗಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಪೊಲೀಸರನ್ನು ರಾಜಕೀಯ ವಿರೋಧಿಗಳ ಧಮನಕ್ಕಾಗಿ ಬಳಕೆ ಮಾಡುತ್ತಿದ್ದಾರೆ. ವಿರೋಧ ಪಕ್ಷದ ಕಾರ್ಯಕರ್ತರ ಮೇಲೆ ಕೇಸ್ ಹಾಕುವಲ್ಲಿ ಪೊಲೀಸರು ನಿರತರಾಗಿದ್ದಾರೆ. ಪೊಲೀಸರು ಇಸ್ಪೀಟು, ಮಟಕಾ, ಕ್ಲಬ್, ಮರಳು ವ್ಯವಹಾರಗಳ ದಂಧೆಯಲ್ಲಿ ಸಂಪೂರ್ಣವಾಗಿ ಶಾಮೀಲಾಗಿದ್ದಾರೆ. ಲಂಚ ಕೊಟ್ಟು ಪೋಸ್ಟಿಂಗ್ ಹಾಕಿಸಿಕೊಂಡು ಬಂದಿದ್ದಾರೆ. ಅಧಿಕಾರಿಗಳು ಹಾಗೂ ಇಡೀ ರಾಜ್ಯ ಸರ್ಕಾರವೇ ಭ್ರಷ್ಟಾಚಾರದಲ್ಲಿ ಮುಳುಗಿದೆ. ಕಾನೂನು ಸುವ್ಯವಸ್ಥೆ ಹದಗೆಡಲು ಕಾಂಗ್ರೆಸ್ ಸರ್ಕಾರವೇ ಕಾರಣ ಎಂದು ಆರೋಪಿಸಿದರು.

ರಾಜ್ಯದಲ್ಲಿ ಗೂಂಡಾಗಳು ನಿರ್ಭಯವಾಗಿ ಓಡಾಡುತ್ತಿದ್ದಾರೆ. ರಾಜ್ಯದಲ್ಲಿ ಸಾಮಾನ್ಯ ಜನರ, ಹೆಣ್ಣುಮಕ್ಕಳ ಪ್ರಾಣಕ್ಕೂ ಸುರಕ್ಷತೆ ಇಲ್ಲ. ರಾಜ್ಯದಲ್ಲಿ ಭಯದ ವಾತಾವರಣ, ಗೂಂಡಾ ವಾತಾವರಣವಿದೆ. ನೇಹಾ ಪ್ರಕರಣದಲ್ಲಿ ನಾವು ರಾಜಕೀಯ ಮಾಡಿಲ್ಲ. ಹಾಡುಹಗಲೇ ಕಾಲೇಜ್ ಕ್ಯಾಂಪಸ್‌ನಲ್ಲಿ ಕೊಲೆ ಆದರೆ ಸುಮ್ಮನೆ ಕುಳಿತುಕೊಳ್ಳಬೇಕಾ, ಕಾಂಗ್ರೆಸ್‌ನವರು ವಿರೋಧ ಪಕ್ಷದಲ್ಲಿದ್ದರೆ ಸುಮ್ಮನೆ ಕೂರುತ್ತಿದ್ದರಾ ಎಂದು ಪ್ರಶ್ನಿಸಿದರು.

ಒಂದು ಕಡೆ ಸಾವಿರ ವಿದ್ಯಾರ್ಥಿಗಳ ಮಧ್ಯೆ ನೇಹಾ ಕೊಲೆ ಆಗುತ್ತಾಳೆ. ಮತ್ತೊಂದು ಕಡೆ ಅಂಜಲಿ ಮನೆ ಹೊಕ್ಕು ಕೊಲೆ ಮಾಡುತ್ತಾರೆ ಅಂದರೆ, ಇದು ಗೂಂಡಾ ರಾಜ್ಯ ಅಲ್ಲದೆ ಇನ್ನೇನು? ಇಷ್ಟೆಲ್ಲಾ ಆದರೂ ಸಿಎಂ ಹಾಗೂ ಗೃಹ ಸಚಿವರು ಏನು ಆಗಿಲ್ಲ ಎನ್ನುವ ರೀತಿಯಲ್ಲಿದ್ದಾರೆ. ಇದರ ಬಗ್ಗೆ ಸಣ್ಣ ಪರಿಶೀಲನೆ ಸಹ ಮಾಡಿಲ್ಲ ಎಂದರು.

ಪತ್ರಿಕಾಗೋಷ್ಠಿಯಲ್ಲಿ ವಿ.ಪ ಸದಸ್ಯ ಎಸ್.ವಿ ಸಂಕನೂರ, ಶಾಸಕ ಸಿ.ಸಿ. ಪಾಟೀಲ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ವಕ್ತಾರ ಎಂ.ಎಂ. ಹಿರೇಮಠ ಇದ್ದರು.

> ನೇಹಾ ಕೊಲೆ ಆದಾಗ ಬರಲಿಲ್ಲ, ತನಿಖೆ ಚುರುಕುಗೊಳಿಸಲಿಲ್ಲ. ಅಂಜಲಿ ಕೊಲೆ ಆದಾಗಲೂ ಉದಾಸೀನ ಮಾಡುತ್ತಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ಅಲ್ಪಸಂಖ್ಯಾತ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ಆದರೂ ತಿರುಗಿ ನೋಡಲಿಲ್ಲ. ಬೆಳಗಾವಿ ಜಿಲ್ಲೆಯಲ್ಲಿ ದಲಿತ ಮಹಿಳೆಯನ್ನು ವಿವಸ್ತ್ರಗೊಳಿಸಿದರೂ ನೋಡಲಲಿಲ್ಲ. ಕಾಂಗ್ರೆಸ್ ಸರ್ಕಾರ ಯಾರ ಪರವಾಗಿದೆ, ರಾಜ್ಯದಲ್ಲಿ ಏನು ನಡೆಯುತ್ತಿದೆ ಎಂದು ಗೃಹ ಸಚಿವರನ್ನುದ್ದೇಶಿಸಿ ಬಸವರಾಜ ಬೊಮ್ಮಾಯಿ ಪ್ರಶ್ನೆಗಳ ಸುರಿಮಳೆಗೈದರು.

# ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ಘೋಷಣೆ: ಸಿಎಂ ಸಿದ್ದರಾಮಯ್ಯಗೆ ಕೆಯುಡಬ್ಲ್ಯುಜೆ ಅಭಿನಂದನೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬಹು ದಿನದ ಬೇಡಿಕೆಯಾಗಿದ್ದ ಗ್ರಾಮೀಣ ಪತ್ರಕರ್ತರರಿಗೆ ಬಸ್ ಪಾಸ್ ನೀಡುವ ಸಂಬಂಧ ಇತ್ತೀಚೆಗೆ ದಾವಣಗೆರೆಯಲ್ಲಿ ನಡೆದ 38ನೇ ಪತ್ರಕರ್ತರ ರಾಜ್ಯ ಸಮ್ಮೇಳನದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಮಾತು ಕೊಟ್ಟಂತೆ ಈ ವರ್ಷದ ಬಜೆಟ್ ನಲ್ಲಿ ಅದನ್ನು ಘೋಷಣೆ ಸಹ ಮಾಡಿದ ಹಿನ್ನೆಲೆಯಲ್ಲಿ ಗುರುವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರ ನೇತೃತ್ವದ ನಿಯೋಗ ಅಭಿನಂದನೆ ಸಲ್ಲಿಸಿತು.

ರಾಜ್ಯದ ವಿವಿಧ ಜಿಲ್ಲೆಗಳ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ, ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಜ್ಯ ಕಾರ್ಯಕಾರಿಣಿ ಸದಸ್ಯರು ರಾಜ್ಯದ ಆಡಳಿತದ ಶಕ್ತಿದೇಗುಲವಾದ ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಮುಖ್ಯಮಂತ್ರಿಗಳ ಕಚೇರಿಗೆ ತೆರಳಿ ಅಭಿನಂದನೆ ಪತ್ರ ಸಲ್ಲಿಸಿ ಅಭಿನಂದನಾ ಸಮಾರಂಭಕ್ಕೆ ಆಗಮಿಸಬೇಕೆಂದು ಮಾಡಿದ ಮನವಿಗೆ ಮುಖ್ಯಮಂತ್ರಿಗಳು ಸಕಾರಾತ್ಮಕವಾಗಿ ಸ್ಪಂದಿಸಿ ಬಸ್ ಪಾಸ್ ಆದೇಶವನ್ನು ಶೀಘ್ರದಲ್ಲಿ ಅನುಷ್ಠಾನಗೊಳಿಸುವ ಭರವಸೆ ನೀಡಿದರು. ಚುನಾವಣೆ ನೀತಿ ಸಂಹಿತೆ ಮುಗಿದ ನಂತರ ಅಭಿನಂದನಾ ಸಮಾರಂಭದ ದಿನಾಂಕ ನಿಗದಿ ಪಡಿಸಿ ಎಂದರು.



ರಾಜ್ಯದ ಸಾವಿರಾರು ಗ್ರಾಮೀಣ ಪತ್ರಕರ್ತರಿಗೆ ನಿಮ್ಮ ಘೋಷಣೆಯಿಂದ ತುಂಬ ಅನುಕೂಲ ಆಗಲಿದ್ದು, ನಿಮ್ಮ ಈ ಉದಾರತೆಗೆ ಪತ್ರಕರ್ತರ ಸಂಘ ಸದಾ ಚಿರಋಣಿಯಾಗಿರುತ್ತದೆ ಎಂದು ತಗಡೂರು ಹೇಳಿದರು. ಇದಕ್ಕೆ ಮುಖ್ಯಮಂತ್ರಿಗಳು ನಗುತ್ತಲ್ಲೆ ಕೈ ಜೋಡಿಸಿದರು. ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ,

ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷರಾದ ಪುಂಡಲೀಕ ಭೀ. ಬಾಳೋಜಿ, ಭವಾನಿಸಿಂಗ್ ಠಾ-ಕೂರ್, ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ರಾಜ್ಯ ಖಜಾಂಚಿ ವಾಸುದೇವ ಹೊಳ್ಳ, ರಾಜ್ಯ ಕಾರ್ಯಕಾರಣಿ ಸದಸ್ಯರಾದ ಮದನಗೌಡ, ಗಣಪತಿ ಗಂಗೊಳ್ಳಿ, ಸತ್ಯಪ್ಪನವರ,

ಬೀದರ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ವಿಜಯನಗರ ಜಿಲ್ಲಾಧ್ಯಕ್ಷ ಸತ್ಯನಾರಾಯಣ, ಮಂಗಳೂರು ಜಿಲ್ಲಾಧ್ಯಕ್ಷ ಶ್ರೀನಿವಾಸ ನಾಯಕ, ಇಂದಾಜಿ, ಭಾಸ್ಕರ್ ರೈ ಕಟ್ಟಾ, ಪುಷ್ಪರಾಜ್ ಮುಂತಾದವರು ಈ ಸಂದರ್ಭದಲ್ಲಿ ಇದ್ದರು.

### ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಮನೆಗೆ ಭೇಟಿ ನೀಡಿದ ಬಿಇಓ ಆರ್.ಎಸ್. ಬುರಡಿ

## ವಿದ್ಯಾರ್ಥಿಗಳನ್ನು ಧನಾತ್ಮಕವಾಗಿ ಪ್ರೇರೇಪಿಸಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಣ ಪಡೆದ ಮಕ್ಕಳು ಭವಿಷ್ಯದಲ್ಲಿ ಉತ್ತಮ ಜೀವನ ನಡೆಸಬಲ್ಲರು. ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು ಧನಾತ್ಮಕವಾಗಿ ಪ್ರೇರೇಪಿಸಿ ಪಾಲಕರ ಮನವೊಲಿಸಿ, ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ-2 ಪರೀಕ್ಷೆಗೆ ಹಾಜಾರಾಗುವಂತೆ ಮಾಡುವುದು ನಮ್ಮೆಲ್ಲರ ಹೊಣೆ ಎಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್. ಎಸ್. ಬುರಡಿ ಹೇಳಿದರು.

ಅವರು ಗದುಗಿನ ರಾಜೀವ ಗಾಂಧಿ ನಗರದ ಎಲ್ಲ ಪ್ರೌಢಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2ಕ್ಕೆ ಹಾಜರಾಗುವ ವಿದ್ಯಾರ್ಥಿಗಳ ಮನೆಗಳಿಗೆ ಭೇಟಿ ಮಾಡಿ ಪಾಲಕರೊಂದಿಗೆ ಸಂವಾದ ನಡೆಸಿ ಮಾತನಾಡಿದರು.

2024ರ ಎಸ್‌ಎಸ್‌ಎಲ್‌ಸಿ-1ರಲ್ಲಿ ಅನುತೀರ್ಣರಾದ ವಿದ್ಯಾರ್ಥಿಗಳಿಗೆ ವಿಶೇಷ ಪರಿಹಾರ ಬೋಧನೆ ತರಗತಿಗಳು ಎಲ್ಲ ಪ್ರೌಢಶಾಲೆಗಳಲ್ಲಿ ಪ್ರಾರಂಭಗೊಂಡಿದ್ದು, ಮಕ್ಕಳು ವರ್ಗಗಳಿಗೆ ಹಾಜರಾಗಿ ಪ್ರಯೋಜನ ಪಡೆದುಕೊಳ್ಳಬೇಕೆಂದರು.

ಸಂಪನ್ಮೂಲ ವ್ಯಕ್ತಿ ಪ್ರಕಾಶ ಮಂಗಳೂರ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹಾಗೂ ಸದರಿ ವಿದ್ಯಾರ್ಥಿಗಳು ಮುಂದಿನ ಉನ್ನತ ಶಿಕ್ಷಣದಿಂದ ವಂಚಿತರಾಗದಂತೆ ಕ್ರಮ ವಹಿಸುವುದು ಅತ್ಯಂತ ಅಗತ್ಯವಾಗಿದೆ ಎಂದರು.

ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್.ಬಿ. ಬಾಗೇವಾಡಿ ಮಾತನಾಡಿ, ವಿಷಯ ಶಿಕ್ಷಕರಿಂದ ವಿಷಯವಾರು ಬೋಧನೆ ನಡೆಯುತ್ತಿದ್ದು, ಪಾಲಕರು ಮಕ್ಕಳನ್ನು ಶಾಲೆಗೆ ಕಳುಹಿಸಿಕೊಡಬೇಕೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಂಪನ್ಮೂಲ ವ್ಯಕ್ತಿಗಳೊಂದಿಗೆ ಶಿಕ್ಷಕರು ಹಾಗೂ ಮಕ್ಕಳನ್ನು ಕೂಡಿಸಿಕೊಂಡು ಮನೆ-ಮನೆಗೆ ಭೇಟಿ ನೀಡಿ ಪಾಲಕರಲ್ಲಿ ಜಾಗೃತಿ ಮೂಡಿಸುತ್ತಿರುವುದಕ್ಕೆ ಪಾಲಕರು ಹರ್ಷ ವ್ಯಕ್ತಪಡಿಸಿದರು.

ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ, ಶಿಕ್ಷಕರಾದ ವಾಯ್.ಎಸ್. ಬೊಮ್ಮನಾಳ, ಪಿ.ಎಸ್. ಕರೆಕುಲದ, ಎಂ.ಎಸ್. ಕುಚಬಾಳ, ಪಿ.ಎಚ್. ಕೊರವರ, ಎಂ.ವ್ಹಿ. ಕುಲಕರ್ಣಿ, ಎಂ.ಬಿ. ಹರ್ತಿ, ಎಂ.ಕೆ. ಬೇವಿನಕಟ್ಟಿ, ಬಸವರಾಜ ವೀರಾಪೂರ ಸೇರಿದಂತೆ ಶಾಲಾ ಮಕ್ಕಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಲಯನ್ಸ್ ಕ್ಲಬ್‌ನಿಂದ ನೇತ್ರದಾನದ ಜಾಗೃತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಲಕ್ಷ್ಮಣಸಾ ನಗರದ ನಿವಾಸಿ ಶ್ರೀಮತಿ ಕಸ್ತೂರಿಬಾಯಿ ಪುಂಡಲೀಕಸಾ ಬದಿ(79) ಗುರುವಾರ ನಿಧನರಾದರು. ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನವರು ಮೃತರ ನೇತ್ರಗಳನ್ನು ದಾನ ಮಾಡುವಂತೆ ಪ್ರೇರಣೆ ನೀಡಿದಾಗ, ಕುಟುಂಬದವರು ಸಹಕಾರ ನೀಡುವ ಮೂಲಕ ನೇತ್ರದಾನಕ್ಕೆ ಮುಂದಾದರು. ಗದಗ ಜಿಮ್ಸ್ ಆಸ್ಪತ್ರೆಯ ತಜ್ಞ ಸಿಬ್ಬಂದಿಗಳು ನೇತ್ರದಾನದ ಪ್ರಕ್ರಿಯೆ ಪೂರ್ಣಗೊಳಿಸಿದರು.



ಲಯನ್ಸ್ ಕ್ಲಬ್ ಸಾರ್ವಜನಿಕರಲ್ಲಿ ನೇತ್ರದಾನದ ಜಾಗೃತಿ ಮೂಡಿಸುತ್ತಿರುವ ಪರಿಣಾಮವಾಗಿ ಜನರಿಂದ ಉತ್ತಮ ಪ್ರತಿಕ್ರಿಯೆ ದೊರೆ-ಯುತ್ತಿದ್ದು, ಇದು ಈ ವರ್ಷದ 17ನೇ ನೇತ್ರದಾನವಾಗಿದೆ. ಮರಣದ ನಂತರ ಮೃತ ವ್ಯಕ್ತಿಯ ಕಣ್ಣುಗಳನ್ನು ಮಣ್ಣು ಮಾಡದೇ, ಬೆಂಕಿಯಲ್ಲಿ ಸುಡದೇ ದಾನ ಮಾಡಿದರೆ ಕಣ್ಣಿಲ್ಲದವರಿಗೆ ಈ ಕಣ್ಣುಗಳನ್ನು ಕಸಿ ಮಾಡಿಸಿಕೊಂಡ ಅಂಧರ ಬಾಳಿಗೆ ಬೆಳಕು ಮೂಡಬಲ್ಲದು. ಆದ್ದರಿಂದ ಮೃತರ ಕುಟುಂಬದವರು ನೇತ್ರದಾನಕ್ಕೆ ಮುಂದಾಗಬೇಕೆಂದು ಕ್ಲಬ್ ಅಧ್ಯಕ್ಷ ರಮೇಶ ಶಿಗ್ಲಿ, ಕಾರ್ಯದರ್ಶಿ ಪ್ರವೀಣ ವಾರಕರ ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಬದಿ ಕುಟುಂಬಸ್ಥರು, ಪದ್ಮಾನಂದ ಬೇವಿನಕಟ್ಟಿ, ಶ್ರೀನಿವಾಸ ಬಾಕಳೆ, ಲಯನ್ಸ್ ಕ್ಲಬ್ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

## ಸಂಪಾದಕೀಯ

# ಪಿಓಕೆ ಜೊತೆ ಚೀನಾ ಆಕ್ರಮಿತ ಭೂ ಪ್ರದೇಶದ ಬಗ್ಗೆಯೂ ಮಾತಾಡಿ

ಕೇಂದ್ರ ಗೃಹ ಸಚಿವ ಅಮಿತ್ ಷಾ ಬಿಹಾರದಲ್ಲಿ ನಡೆದ ಚುನಾವಣೆ ಪ್ರಚಾರ ಸಭೆಯಲ್ಲಿ, ಬಿಜೆಪಿ ಈ ಬಾರಿ ಅಧಿಕಾರಕ್ಕೆ ಬಂದರೆ ಪಾಕ್ ಆಕ್ರಮಿತ ಕಾಶ್ಮೀರವನ್ನು ವಶಪಡಿಸಿಕೊಳ್ಳುವದಾಗಿ ನೀಡಿರುವ ಹೇಳಿಕೆ ಈಗ ಚರ್ಚೆಗೆ ಗ್ರಾಸವಾಗಿದೆ.

ಪಾಕ್ ಆಕ್ರಮಿತ ಕಾಶ್ಮೀರವನ್ನು ಮರಳಿ ಪಡೆಯಲು ಸರ್ವ ರೀತಿಯ ಪ್ರಯತ್ನಗಳನ್ನ ಮಾಡುತ್ತೇವೆ. ಯಾವುದೇ ಬೆಲೆ ತೆತ್ತಾದರೂ ಆ ಪ್ರದೇಶವನ್ನ ಪಶಪಡಿಸಿಕೊಳ್ಳುತ್ತೇವೆ ಎನ್ನುವ ಮೂಲಕ ಕೇಂದ್ರ ಗೃಹ ಸಚಿವ ಅಮಿತ್ ಷಾ, ಮತ್ತದೇ ಭಾವನಾತ್ಮಕ ವಿಷಯವನ್ನು ಮುಂದಿಟ್ಟುಕೊಂಡು ಚುನಾವಣೆಗೆ ಸಜ್ಜಾಗಿದ್ದಾರೆ.

ಪಿಓಕೆ ವಶಪಡಿಸಿಕೊಳ್ಳುವ ಅಮಿತ್ ಶಾ ಅವರ ಹೇಳಿಕೆ ಅತ್ಯಂತ ಸ್ವಾಗತ. ಆದರೆ ಬಿಹಾರ್ ಚುನಾವಣೆ ಪ್ರಚಾರದಲ್ಲಿ ಬಿಹಾರ್ ಅಭಿವೃದ್ಧಿಯ ಬಗ್ಗೆ ಮಾತನಾಡಬಹುದಿತ್ತು. ದೇಶದ ಇನ್ನಿತರ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ಬಿಹಾರ್ ಈಗಲೂ ಹಿಂದುಳಿದ ರಾಜ್ಯವೇ. ಆದರೂ ಬಿಹಾರ್ ಅಭಿವೃದ್ಧಿಯ ಬಗ್ಗೆ ಮಾತನಾಡದೆ ಪಿಓಕೆ ಬಗ್ಗೆ ಪ್ರಸ್ತಾಪಿಸಿದ್ದಾರೆ.

ಅಮಿತ್ ಶಾ ಅವರ ಪಿಓಕೆ ವಶಪಡಿಸಿಕೊಳ್ಳುವ ಅಭಿಪ್ರಾಯವನ್ನು ಮತ್ತೊಮ್ಮೆ ಸ್ವಾಗತಿಸುವ ಜೊತೆಗೆ ಚೀನಾ ಆಕ್ರಮಿಸಿಕೊಂಡಿರುವ ಭಾರತದ ಭೂ ಪ್ರದೇಶವನ್ನು ಮರಳಿ ಪಡೆಯುವ ಪ್ರಯತ್ನವನ್ನ ಮಾಡಬೇಕು.

ಪಾಕಿಸ್ತಾನ ಒಂದೇ ಭಾರತದ ನೆರೆಯ ರಾಷ್ಟ್ರ ಅಲ್ಲ. ಚೀನಾ ಮತ್ತು ಬಾಂಗ್ಲಾದೇಶ ಸಹ ಇವೆ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು. ಭಾರತದ ನೆಲವನ್ನ ಯಾರೇ ಅಕ್ರಮಿಸಿಕೊಂಡಿದ್ದರು ಅದನ್ನು ಮರಳಿ ಪಡೆಯುವ ಪ್ರಯತ್ನ ಮಾಡಲೇಬೇಕು. ಭಾರತದ ನೆಲವನ್ನ ವಶಪಡಿಸಿಕೊಳ್ಳುವ ವಿಚಾರದಲ್ಲಿ ರಾಜಕಾರಣ ಮಾಡಬಾರದು.

ಮೊದಲು ಪಾಕಿಸ್ತಾನ ಅಕ್ರಮಿಸಿಕೊಂಡಿರುವ ಪ್ರದೇಶವನ್ನು ವಶಪಡಿಸಿಕೊಳ್ಳಲಿ. ಅದಾದ ನಂತರ ಚೀನಾ ವಶಪಡಿಸಿಕೊಂಡಿರುವ ಪ್ರದೇಶವನ್ನ ಮರಳಿ ಪಡೆಯಲಿ. ಪಿಓಕೆ ಜೊತೆಗೆ ಚೀನಾ ಬಗ್ಗೆ ಮಾತನಾಡುವ ಧೈರ್ಯವನ್ನ ಅಮಿತ್ ಶಾ ತೋರಿಸಿದಲ್ಲಿ ಅವರ ಮೇಲೆ ಭರವಸೆ ಮೂಡಬಹುದು.

## ಶ್ರೀನಿವಾಸ ಕಲ್ಯಾಣ ಮಹೋತ್ಸವ ನಾಳೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸವಣೂರ ರಸ್ತೆಯಲ್ಲಿರುವ ತಿರುಪತಿ ತದ್ರೂಪ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ಮೇ.18ರಂದು ಶ್ರೀ ಶ್ರೀನಿವಾಸ ಕಲ್ಯಾಣ ಮಹೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 6.30ಕ್ಕೆ ಕ್ಷೀರಾಭಿಷೇಕ, 7.30ಕ್ಕೆ ತುಳಸಿ ಅರ್ಚನೆ, 8ಕ್ಕೆ ಶ್ರೀ ಲಕ್ಷ್ಮೀ ನಾರಾಯಣ ಮ್ತು ನವಗ್ರಹ ಹೋಮ ನೆರವೇರುವುದು. ಬೆಳಿಗ್ಗೆ 11.30ಕ್ಕೆ ಶ್ರೀ ಶ್ರೀನಿವಾಸ ಕಲ್ಯಾಣ ಮಹೋತ್ಸವ ಕಾರ್ಯಕ್ರಮ, ಮಧ್ಯಾಹ್ನ 1ಕ್ಕೆ ಮಹಾಮಂಗಳಾರತಿ, ಪ್ರಸಾದ, ಸಂಜೆ 6ಕ್ಕೆ ಪಲ್ಲಕ್ಕಿ ಸೇವೆ ಜರುಗುವುದು ಎಂದು ದೇವಸ್ಥಾನ ಟ್ರಸ್ಟ್ ಪ್ರಕಟಣೆಯಲ್ಲಿ ತಿಳಿಸಿದೆ.

## ಒಡಿಶಾದಲ್ಲಿ ಬಿಜೆಪಿ-ಬಿಜೆಡಿ ಬೆಂಬಲಿಗರ ನಡುವೆ ಘರ್ಷಣೆ: ಓರ್ವ ಮೃತ್ಯು, ಹಲವರಿಗೆ ಗಾಯ



■ ವಿಜಯಸಾಕ್ಷಿ ಸುದ್ದಿ, ಒಡಿಶಾ

ಲೋಕಸಭೆ ಚುನಾವಣೆಯ ಹೊಸ್ತಿಲಲ್ಲಿ ಒಡಿಶಾದ ಗಂಜಾಂ ಜಿಲ್ಲೆಯಲ್ಲಿ ಬಿಜು ಜನತಾದಳ (ಬಿಜೆಡಿ) ಮತ್ತು ಬಿಜೆಪಿ ಬೆಂಬಲಿಗರ ನಡುವೆ ಘರ್ಷಣೆ ನಡೆದಿದ್ದು, ಓರ್ವ ಮೃತಪಟ್ಟು, ಏಳು ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ.

ಮೃತರನ್ನು ಶ್ರೀ ಕೃಷ್ಣ ಶರಣಾಪುರ ಗ್ರಾಮದ ನಿವಾಸಿ ದಿಲೀಪ್ ಕುಮಾರ್ ಪಹಾನ (28) ಎಂದು ಗುರುತಿಸಲಾಗಿದೆ. ಘರ್ಷಣೆಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ದಿಲೀಪ್ ಕುಮಾರ್ ಎಂಕೆಸಿಜಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಮೃತಪಟ್ಟಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಚುನಾವಣಾ ಪ್ರಚಾರಕ್ಕಾಗಿ ಪೋಸ್ಟರ್ ಅಳವಡಿಕೆ ವೇಳೆ ಕಲ್ಲಿಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯ ಶ್ರೀ ಕೃಷ್ಣ ಶರಣಾಪುರ ಗ್ರಾಮದಲ್ಲಿ ಘರ್ಷಣೆ ಸಂಭವಿಸಿದೆ. ಬಿಜೆಡಿ ಮತ್ತು ಬಿಜೆಪಿ ಬೆಂಬಲಿಗರು ಹರಿತವಾದ ಆಯುಧಗಳನ್ನು ಬಳಸಿ ಹೊಡೆದಾಟ ನಡೆಸಿದ್ದಾರೆ. ಗಾಯಗೊಂಡವರು ಪ್ರಸ್ತುತ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಮತ್ತು ಅವರ ಸ್ಥಿತಿ ಸ್ಥಿರವಾಗಿದೆ.

ಬಿಜೆಪಿ ಕಾರ್ಯಕರ್ತನ ಸಾವಿನ ಬೆನ್ನಲ್ಲಿ ಬಿಜೆಪಿ ಬೆಂಬಲಿಗರು ಬಿಜೆಡಿ ಅಭ್ಯರ್ಥಿ ಹಾಗೂ ಕಲ್ಲಿಕೋಟೆ ವಿಧಾನಸಭಾ ಕ್ಷೇತ್ರದ ಹಾಲಿ ಶಾಸಕ ಸೂರ್ಯಮಣಿ ಬೈದ್ಯ ಅವರ ನಿವಾಸದ ಬಳಿ ನಿಲ್ಲಿಸಿದ್ದ ಹಲವಾರು ವಾಹನಗಳಿಗೆ ಹಾನಿಗೊಳಿಸಿದ್ದಾರೆ. ಪೊಲೀಸ್ ಠಾಣೆ ಬಳಿ ರಸ್ತೆ ತಡೆದು ಪ್ರತಿಭಟನೆ ನಡೆಸಿದ್ದಾರೆ.

## ರೈತರ ಕಣ್ಣೀರು ಒರೆಸಬೇಕಿದ್ದ ರಾಜ್ಯ ಸರಕಾರ ಕೈಕಟ್ಟಿ ಕೂತಿದೆ : ಎಚ್.ಡಿ.ಕುಮಾರಸ್ವಾಮಿ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು


"ಯಾವ ಕಡೆಯಿಂದ ನೋಡಿದರೂ ರೈತರ ಸಂಕಷ್ಟಕ್ಕೆ ಕೊನೆಯೇ ಇಲ್ಲ ಎನ್ನುವಂತಾಗಿದೆ. ಹೆಸರಿಗೆ ಅನ್ನದಾತ, ಆದರೆ ಅವರ ಕಣ್ಣೀರು ಒರೆಸಿ ಅವರಿಗೆ ಧಾತನಾಗಿ ನಿಲ್ಲಬೇಕಿದ್ದ ರಾಜ್ಯ ಸರಕಾರ ಕೈಕಟ್ಟಿ ಕೂತಿದೆ ಎಂದು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿರುವ ಅವರು, "ಕೇಂದ್ರ ಸರಕಾರದಿಂದ ರೈತರ ಬ್ಯಾಂಕ್ ಖಾತೆಗಳಿಗೆ ಜಮೆ ಆಗಿದ್ದ ಬರ ಪರಿಹಾರ ಹಣವನ್ನು ಸಾಲಕ್ಕೆ ಜಮೆ ಮಾಡಿಕೊಳ್ಳುತ್ತಿರುವ ಬ್ಯಾಂಕ್ ಗಳ ವರ್ತನೆ ನಿಜಕ್ಕೂ ಕ್ರೂರಾತಿ ಕ್ರೂರ, ಖಂಡನೀಯ. ಮೊದಲೇ ತೀವ್ರ ಬರ, ಬೆಳೆನಾಶದಿಂದ ಕಂಗೆಟ್ಟಿರುವ ರೈತರ ಕಣ್ಣಲ್ಲಿ ರಕ್ತ ಕಣ್ಣೀರು ತರಿಸುವ ಅಮಾನವೀಯ ಕ್ರಮ" ಎಂದು ಅಸಮಾಧಾನ ಹೊರಹಾಕಿದ್ದಾರೆ.

"ರಾಜ್ಯ ಸರಕಾರ ಕೂಡಲೇ ಸಾಲ ನೀಡಿರುವ ಎಲ್ಲಾ ಬ್ಯಾಂಕ್ ಗಳ ಮುಖ್ಯಸ್ಥರ ಸಭೆ ಕರೆದು, ಈ ಬಗ್ಗೆ ಗಂಭೀರವಾಗಿ ಚರ್ಚೆ ನಡೆಸಬೇಕು. ಬರ ಪರಿಹಾರ ಮೊತ್ತವನ್ನು ಸಾಲಕ್ಕೆ ಜಮೆ ಮಾಡಬಾರದು ಎಂದು ತಾಕೀತು ಮಾಡಬೇಕು" ಎಂದು ಆಗ್ರಹಿಸಿದ್ದಾರೆ.

### ಶ್ರೇಷ್ಠ, ಶ್ರೀಮಂತ ಪರಂಪರೆಯ ಸಾಕ್ಷಿಯಾಗಿರುವ ಶ್ರೀ ಸೋಮೇಶ್ವರ ದೇವಾಲಯ

# ಪುಲಿಗೆರೆಯ ಸೋಮೇಶ್ವರನ ಜಾತ್ರೆಗೆ ಬನ್ನಿ





ಕ್ರಿ.ಶ 942ರಲ್ಲಿಯೇ ಕನ್ನಡದ ಆದಿಕವಿ ಪಂಪನಿಂದ ಹಾಡಿ ಹೊಗಳಿಸಿಕೊಂಡ ಕನ್ನಡ, ಕರ್ನಾಟಕದ ಪ್ರಾಚೀನ ಹಿರಿಮೆಯ ಪಟ್ಟಣ ಲಕ್ಷ್ಮೇಶ್ವರ ಅಂದರೆ ಅಂದಿನ ಪುಲಿಗೆರೆ. ಕ್ರಿ.ಶ 600ರ ಸುಮಾರಿನಲ್ಲಿಯೇ ಪುಲಿಗೆರೆ 300 ಎಂಬ ಆಡಳಿತ ವಿಭಾಗದ ರಾಜಧಾನಿಯಾಗಿತ್ತು. ಕನ್ನಡದ ಪ್ರಮುಖ ರಾಜವಂಶಗಳಾದ ಬಾದಾಮಿಯ ಚಾಲುಕ್ಯರು, ರಾಷ್ಟ್ರಕೂಟರು, ಗಂಗರು, ಕಲ್ಯಾಣ ಚಾಲುಕ್ಯರು, ಕದಂಬರು, ಕಲಚೂರಿಗಳು, ವಿಜಯನಗರದ ಅರಸರು, ಬಿಜಾಪುರದ ಸುಲ್ತಾನರು ಮುಂತಾದ ರಾಜ ವಂಶಗಳ ರಾಜಧಾನಿಯಾಗಿ ಮೆರೆದ ಶ್ರೇಷ್ಠ ಇತಿಹಾಸದ ಶ್ರೀಮಂತ ಪರಂಪರೆಯ ಪಟ್ಟಣ. ಇಂತಹ ಶ್ರೇಷ್ಠ, ಶ್ರೀಮಂತ ಪರಂಪರೆಯ ಸಾಕ್ಷಿಯಾಗಿ ನಿಂತಿರುವ ದೇವಾಲಯವೇ ವಾಸ್ತುಶಿಲ್ಪ ವೈಭವದ ಶ್ರೀ ಸೋಮೇಶ್ವರ ದೇವಾಲಯ.

12ನೇ ಶತಮಾನದವರೆಗೂ ಲಕ್ಷ್ಮೇಶ್ವರ ನಾಡಿನಲ್ಲಿಯೇ ಪ್ರಬಲವಾದ ಜೈನ ಮತ ಕೇಂದ್ರವಾಗಿತ್ತು. ಇಂದಿಗೂ ಅಸ್ತಿತ್ವದಲ್ಲಿರುವ ಆದಿಕವಿ ಪಂಪ ತನ್ನ 'ಆದಿಪುರಾಣ' ಇಲ್ಲಿಯೇ ಬರೆದನೆಂದು ಹೇಳಲಾಗುವ ಶಂಖ ಬಸದಿ, ತೀರ್ಥ ಬಸದಿ, ಶಾಂತಿನಾಥ ಬಸದಿ, ಗೊಗ್ಗಿಯ ಬಸದಿ, ಆನೆ ಸಜ್ಜೆ ಬಸದಿ ಸೇರಿ ಸುಮಾರು 700 ಬಸದಿಗಳು ಇದ್ದವು ಎಂದು ಹೇಳಲಾಗುತ್ತದೆ.

ಸಾಮಾನ್ಯವಾಗಿ ಶಿವ ದೇವಾಲಯಗಳಲ್ಲಿ ಶಿವನನ್ನು ಲಿಂಗುವಿನ ಆಕಾರದಲ್ಲಿ ಸ್ಥಾಪಿಸಲಾಗಿರುತ್ತದೆ. ಆದರೆ ಪುಲಿಗೆರೆಯ ಸೋಮೇಶ್ವರ ಪರಿವಾರ ಸಮೇತ ಮೂರ್ತಿ ರೂಪದಲ್ಲಿರುದು ಪ್ರಪಂಚದಲ್ಲಿಯೇ ಅಪರೂಪ. 'ಸೋಮೇಶ್ವರ' ಪದವಿಂಗಡಣೆ ಮಾಡಿ ನೋಡಿದರೆ ಸ+ಉಮಾ+ಈಶ್ವರ ಎಂದಾಗುತ್ತದೆ. ಅಂದರೆ ಇಲ್ಲಿ ಶಿವ ತನ್ನ ಪತ್ನಿಯಾದ ಉಮಾ ಅಂದರೆ ಪಾರ್ವತಿಯೊಂದಿಗೆ ತನ್ನ ವಾಹನವಾದ ನಂದಿಯನ್ನೇರಿ ಹೊರಟಿರುವ ಅತ್ಯಂತ ಆಕರ್ಷಕ ಮೂರ್ತಿಯನ್ನು ನೋಡಬಹುದಾಗಿದೆ. ಶಿಲ್ಪವು ಚಾಲುಕ್ಯ ಶೈಲಿಯಲ್ಲಿದ್ದು, ನೋಡಲು ನಯನಮನೋಹರವಾಗಿದೆ.

ಸೋಮೇಶ್ವರ ದೇವಸ್ಥಾನವು ಮುಖ್ಯ ದೇವಾಲಯವು ಪೂರ್ವಾಭಿಮುಖವಾಗಿದೆ. ಇದರಲ್ಲಿ ಗರ್ಭಗೃಹ, ಅಂತರಾಳ, ನವರಂಗ ಮತ್ತು ವಿಶಾಲವಾದ ಮುಖ ಮಂಟಪಗಳಿವೆ. ಅತ್ಯಂತ ಸುಂದರವಾದ ಕೆತ್ತನೆಯ ಶಿಲ್ಪ ಕಲಾಕೃತಿಗಳ ವೈಭವವನ್ನು ಇಲ್ಲಿ ನೋಡಬಹುದು. ಗರ್ಭಗೃಹದ ಮೇಲೆ ಬಹುಕೋನಾಕಾರದ ಕದಂಬ ನಾಗರ ಶೈಲಿಯ ಶಿಖರವಿದೆ. ಶಿಖರದಲ್ಲಿ ಇಂದು ಕಾಣುತ್ತಿರುವ ಲೋಹದ ಕಲಶವನ್ನು ರಂಭಾಪುರಿ ಪಂಚಾಚಾರ್ಯ ಜಗದ್ಗುರು ವೀರಗಂಗಾಧರ ಮಹಾಸ್ವಾಮಿಗಳು ಪ್ರತಿಷ್ಠಾಪಿಸಿದರೆಂದು ತಿಳಿದು ಬರುತ್ತದೆ.

ನಮ್ಮ ಪೂರ್ವಜರ ಶ್ರೇಷ್ಠ ವೈಜ್ಞಾನಿಕ ಹಾಗೂ ತಾಂತ್ರಿಕ ಜ್ಞಾನಕ್ಕೆ ಸೋಮೇಶ್ವರ ದೇವಸ್ಥಾನ ಒಂದು ಉತ್ತಮ ಉದಾಹರಣೆ. ಪ್ರತಿ ವರ್ಷ ಮೇ ತಿಂಗಳ ಮೂರನೇ ವಾರ ಸೂರ್ಯನ ಪ್ರಥಮ ಕಿರಣ ಸುಮಾರು ಒಂದು ನೂರು ಮೀಟರ್ ಕಟ್ಟಡವನ್ನು ಭೇದಿಸಿ ಗರ್ಭಗೃಹದಲ್ಲಿನ ಸೋಮೇಶ್ವರನ ಚರಣ ಸ್ಪರ್ಶ ಮಾಡುವದನ್ನು ಇಂದಿಗೂ ಕಾಣಬಹುದಾಗಿದೆ. ಅಂದರೆ ನಮ್ಮ ಪೂರ್ವಜರು ಸಾವಿರ ವರ್ಷಗಳ ಹಿಂದೆಯೇ ವೈಜ್ಞಾನಿಕವಾಗಿ ಅಧ್ಯಯನ ಮಾಡಿ, ನಾವು ಈಗ ಹೇಳುವ ಅಕ್ಷಾಂಶ-ರೇಖಾಂಶಗಳ ಆಧಾರಿತವಾಗಿ ಈ ದೇವಾಲಯ ನಿರ್ಮಿಸಿದರೆಂದು ಅರ್ಥ ಮಾಡಿಕೊಳ್ಳಬಹುದು.

ಇಲ್ಲಿರುವ ಲಜ್ಜಾಗೌರಿ ದೇವಸ್ಥಾನವು ನಮ್ಮ ಪೂರ್ವಜರ ವೈದ್ಯಕೀಯ ಪ್ರಜ್ಞೆಗೆ ಸಾಕ್ಷಿಯಾಗಿ ನಿಂತಿದೆ. ಮಹಿಳೆಯ ಪ್ರಸವ ಭಂಗಿಯಲ್ಲಿರುವ ಹಾಗೆ ನಿರ್ಮಿತವಾದ ಈ ಮೂರ್ತಿ, ಆ ಮೂಲಕ ಗರ್ಭಿಣಿ ಮಹಿಳೆಯರ ಸುಕ್ಷೇಮ ಹೆರಿಗೆಗೆ ತಿಳುವಳಿಕೆ ನೀಡುವಂತೆ ಮೂಡಿಬಂದಿರುವದು ಆ ಜನರ ಪ್ರಜ್ಞೆಯ ಬಗ್ಗೆ ಅಭಿಮಾನಪಡುವಂತಿದೆ. ಈ ಮೂರ್ತಿಯ ಐತಿಹಾಸಿಕ ಮಹತ್ವ ಅರಿತ ಸುಧಾ ಮೂರ್ತಿಯವರು ಸೋಮೇಶ್ವರ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಮುಂದಾದರು ಎಂಬುದನ್ನು ಸ್ಮರಿಸಬಹುದು.

ಹಳಗನ್ನಡ ಸಾಹಿತ್ಯದಲ್ಲಿ ಅತಿ ಹೆಚ್ಚು ಉಲ್ಲೇಖವಾದ ದೇವಾಲಯವೆಂದರೆ ಅದು ಪುಲಿಗೆರೆ ಸೋಮನಾಥ ದೇವಾಲಯವೆಂದರೆ ಅತಿಶಯವಲ್ಲ. ಕನ್ನಡತನದ ಹಿರಿಮೆಯ ಬಹುತೇಕ ಸಾಹಿತಿಗಳು ಈ ದೇವಾಲಯವನ್ನು ಉಲ್ಲೇಖಿಸಿ ಬರೆದಿರುವದು ಹೆಮ್ಮೆಯ ಸಂಗತಿ. ಹರಿಹರ, ರಾಘವಾಂಕ, ದುರ್ಗಸಿಂಹ, ಆದಯ್ಯ, ಬ್ರಹ್ಮಶಿವ, ಏಕಾಂತರಾಮಯ್ಯ, ಮೇಚರಸ, ನಾಗಾರ್ಜುನ ಕವಿ, ಸಹಜ ನಾಗದೇವ, ಹುಲಿಗೆರೆ ಸೋಮಣ್ಣ, ಮಹಾಲಿಂಗದೇವರು, ಪಾಲ್ಕುರಿಕೆ ಸೋಮನಾಥ, ಆಚಣ್ಣ, ಸುರಂಗ ಕವಿ, ಪುಲಿಗೆರೆಯ ಸೋಮ, ಪುಲಿಗೆರೆಯ ಸಿಂಹರಾಜ ಇನ್ನೂ ಹಲವಾರು ಕವಿಗಳು ಈ ದೇವಾಲಯದ ಶ್ರೇಷ್ಠತೆಯನ್ನು ಸಾರಿದ್ದಾರೆ.

ಇಂತಹ ಐತಿಹಾಸಿಕ, ಧಾರ್ಮಿಕ, ಸಾಂಸ್ಕೃತಿಕ, ವೈಜ್ಞಾನಿಕ ಹಿರಿಮೆಯ ಶ್ರೇಷ್ಠ ಪರಂಪರೆಯ ಸೋಮನಾಥನ ಜಾತ್ರೆಯ ರಥೋತ್ಸವವು ಪ್ರತಿ ವರ್ಷ ವೈಶಾಖ ಮಾಸ ಶುದ್ಧ ದಶಮಿಯ ಶುಭ ಮುಹೂರ್ತದಲ್ಲಿ ಅತ್ಯಂತ ಶ್ರದ್ಧಾ ಭಕ್ತಿಯಿಂದ ಅಸಂಖ್ಯಾತ ಭಕ್ತಜನತೆಯ ಹರ್ಷೋದ್ಗಾರಗಳ ನಡುವೆ ಜರುಗುತ್ತದೆ. ಸ್ಥಳೀಯ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ, ಶ್ರೀ ಸೋಮೇಶ್ವರ ಜಾತ್ರಾ ಕಮಿಟಿ, ಅರ್ಚಕರ ಸೇವಾ ಸಮಿತಿ ಹಾಗೂ ಸೋಮೇಶ್ವರ ಪುರಾಣ ಸಮಿತಿಯವರು ಅತ್ಯಂತ ಭಕ್ತಿ ಭಾವಗಳಿಂದ ಎಲ್ಲ ಧಾರ್ಮಿಕ ಕಾರ್ಯಕ್ರಮಗಳನ್ನು ಸಂಘಟಿಸುತ್ತಾರೆ. ಈ ವರ್ಷ ಮೇ 17ರಂದು ಉಡಿ ತುಂಬುವ ಕಾರ್ಯಕ್ರಮ, 18ರಂದು ರಥೋತ್ಸವ, ಮೇ 19ರಂದು ಕಡುಬಿನ ಕಾಳಗ ಹಾಗೂ 20ರಂದು ಓಕುಳಿ ಕಾರ್ಯಕ್ರಮಗಳು ಅಪಾರ ಸಂಖ್ಯೆಯ ಭಕ್ತಾಧಿಗಳ ಭಕ್ತಿ ವೈಭವದ ನಡುವೆ ಜರುಗಲಿದೆ.

ಬನ್ನಿ, ದಕ್ಷಿಣ ಸೋಮ, ಜ್ಞಾನ ಸೋಮನ ದರ್ಶನ ಹಾಗೂ ಶತಶತಮಾನಗಳ ಶ್ರೇಷ್ಠತೆಯನ್ನು ಶ್ರೀಮಂತ ಪರಂಪರೆಯನ್ನು ಕಣ್ತುಂಬಿಸಿಕೊಳ್ಳಿ.



– **ಈಶ್ವರ ಸೋ.ಮೆಡ್ಲೇರಿ.**
ಪ್ರಧಾನ ಕಾರ್ಯದರ್ಶಿ,
ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ,
ಲಕ್ಷ್ಮೇಶ್ವರ.

## ಬಿಜೆಪಿ ಕೇಂದ್ರದಲ್ಲಿ ಮತ್ತೆ ಅಧಿಕಾರಕ್ಕೆ ಬಂದರೆ ಮೀಸಲಾತಿ ಕೊನೆಗೊಳಿಸಲಿದೆ: ಅರವಿಂದ್ ಕೇಜ್ರಿವಾಲ್

■ ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿ ಕೇಂದ್ರದಲ್ಲಿ ಮತ್ತೆ ಅಧಿಕಾರಕ್ಕೆ ಬಂದರೆ ಮೀಸಲಾತಿ ಕೊನೆಗೊಳಿಸಲಿದೆ, ಸಂವಿಧಾನವನ್ನು ಬದಲಿಸಲಿದೆ ಎಂದು ಅರವಿಂದ್ ಕೇಜ್ರಿವಾಲ್ ಮತ್ತು ಅಖಿಲೇಶ್ ಯಾದವ್ ಬಿಜೆಪಿಯನ್ನು 3ನೇ ಬಾರಿಗೆ ಏಕೆ ಆಯ್ಕೆ ಮಾಡಬಾರದು ಎಂದು ಜಂಟಿ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದಾರೆ.

ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಅವರು ಬಿಜೆಪಿಯ "400 ಪಾರ್" ಘೋಷಣೆಯನ್ನು ಟೀಕಿಸಿದ್ದು, ಕೇಸರಿ ಪಕ್ಷದ ನಿಜವಾದ ಗುರಿ 400 ಸ್ಥಾನಗಳಲ್ಲ, 143 ಸ್ಥಾನಗಳು, ಯುಪಿ, ದೆಹಲಿ, ಪಂಜಾಬ್ ರಾಜ್ಯಗಳಲ್ಲಿ ಬಿಜೆಪಿಗೆ ದೊಡ್ಡ ಹೊಡೆತ ಬೀಳಲಿದೆ. ನಾವು ರೊಟ್ಟಿ, ಕಪಾಡಾ, ಮಕಾನ್‌ಗಾಗಿ ಹೋರಾಡಬೇಕಾಗಿದೆ, ಆದರೆ ನಮಗೆ ದೊಡ್ಡ ಹೋರಾಟವೆಂದರೆ ಸಂವಿಧಾನವನ್ನು ಉಳಿಸುವುದಾಗಿದೆ. ಎಎಪಿ ಮತ್ತು ಇಂಡಿಯಾ ಮೈತ್ರಿಕೂಟವು ಬಿಜೆಪಿಯನ್ನು ಅಧಿಕಾರದಿಂದ ಹೊರಹಾಕಲಿದೆ ಎಂದು ಹೇಳಿದ್ದಾರೆ.



ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಮಾತನಾಡುತ್ತಾ, ಬಿಜೆಪಿ 220ಕ್ಕಿಂತ ಕಡಿಮೆ ಸ್ಥಾನಗಳನ್ನು ಪಡೆಯಲಿದೆ. ಹರಿಯಾಣ, ದೆಹಲಿ, ಪಂಜಾಬ್, ಕರ್ನಾಟಕ, ಮಹಾರಾಷ್ಟ್ರ, ಪಶ್ಚಿಮ ಬಂಗಾಳ, ಯುಪಿ, ಬಿಹಾರ, ಜಾರ್ಖಂಡ್ ಮತ್ತು ರಾಜಸ್ಥಾನದಲ್ಲಿ ಬಿಜೆಪಿಯ ಸ್ಥಾನಗಳಲ್ಲಿ ಕಡಿತವಾಗಲಿದೆ. ಈ ಬಾರಿ ಬಿಜೆಪಿ ಸರಕಾರ ರಚಿಸಲು ಸಾಧ್ಯವಿಲ್ಲ, ಇಂಡಿಯಾ ಮೈತ್ರಿಕೂಟ ಸರಕಾರವನ್ನು ರಚಿಸಲಿದೆ ಎಂದು ಹೇಳಿದ್ದಾರೆ.

ಲೋಕಸಭೆ ಚುನಾವಣೆಯ ನಂತರ ಬಿಜೆಪಿ ಅಧಿಕಾರಕ್ಕೆ ಬಂದರೆ, ಅವರು ಸಂವಿಧಾನವನ್ನು ಬದಲಾಯಿಸುತ್ತಾರೆ ಮತ್ತು ಮೀಸಲಾತಿಯನ್ನು ಕೊನೆಗೊಳಿಸುತ್ತಾರೆ. ಬಿಜೆಪಿಗರು ಯಾವಾಗಲೂ ಮೀಸಲಾತಿಗೆ ವಿರುದ್ಧವಾಗಿದ್ದಾರೆ. ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದರೆ ಉತ್ತರ ಪ್ರದೇಶದ ಮುಖ್ಯಮಂತ್ರಿ ಸ್ಥಾನದಿಂದ ಯೋಗಿ ಆದಿತ್ಯನಾಥ್ ಅವರನ್ನು ಮೋದಿ ಅಧಿಕಾರದಿಂದ ಕೆಳಗಿಳಿಸುತ್ತಾರೆ ಎಂದು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಹೇಳಿದ್ದಾರೆ.

ಪಿಎಂ ಮೋದಿಯವರ ನಿವೃತ್ತಿಯ ಕುರಿತು ಪ್ರತಿಕ್ರಿಯಿಸಿದ ಕೇಜ್ರಿವಾಲ್, ಪಿಎಂ ಮೋದಿ ಅವರು ಸೆಪ್ಟೆಂಬರ್ 17, 2025ರಂದು 75ನೇ ವರ್ಷಕ್ಕೆ ಕಾಲಿಡಲಿದ್ದಾರೆ. ಅವರು ಅಮಿತ್ ಶಾ ಅವರನ್ನು ತಮ್ಮ ಉತ್ತರಾಧಿಕಾರಿಯನ್ನಾಗಿ ಮಾಡಲು ನಿರ್ಧರಿಸಿದ್ದಾರೆ. ಅವರು 75 ವರ್ಷಗಳ ನಂತರ ನಿವೃತ್ತರಾಗುವುದಿಲ್ಲ ಎಂದು ಪ್ರಧಾನಿ ಮೋದಿ ಈವರೆಗೆ ಹೇಳಿಲ್ಲ, ಅವರು ಈ ನಿಯಮವನ್ನು ಮಾಡಿದ್ದಾರೆ ಮತ್ತು ಅವರು ಈ ನಿಯಮವನ್ನು ಅನುಸರಿಸುತ್ತಾರೆ ಎಂದು ನನಗೆ ಸಂಪೂರ್ಣ ಭರವಸೆ ಇದೆ ಎಂದು ಹೇಳಿದ್ದಾರೆ.

ಅಮಿತ್ ಶಾಗೆ ಅಡ್ಡಿಯಾಗಬಹುದಾದ ನಾಯಕರನ್ನು ಬದಿಗೆ ಸರಿಸಲಾಗಿದೆ. ಶಿವರಾಜ್ ಸಿಂಗ್ ಚೌಹಾಣ್, ವಸುಂಧರಾ ರಾಜೇ, ರಮಣ್ ಸಿಂಗ್, ದೇವೇಂದ್ರ ಫಡ್ನವೀಸ್ ಮತ್ತು ಮನೋಹರ್ ಲಾಲ್ ಖಟ್ಟರ್ ಅವರನ್ನು ಬದಿಗೆ ಸರಿಸಲಾಗಿದೆ. ಅಮಿತ್ ಶಾ ಹಾದಿಗೆ ಮುಳ್ಳಾಗಬಹುದೆಂದು ಹೇಳಲಾದ ವ್ಯಕ್ತಿ ಆದಿತ್ಯನಾಥ್. ಬಿಜೆಪಿ ಸರ್ಕಾರ ರಚನೆಯಾದರೆ ಎರಡು ತಿಂಗಳಲ್ಲಿ ಆದಿತ್ಯನಾಥ್ ಅವರನ್ನು ಕೆಳಗಿಳಿಸಲು ನಿರ್ಧರಿಸಿದ್ದಾರೆ ಎಂದು ಕೇಜ್ರಿವಾಲ್ ಹೇಳಿದ್ದಾರೆ.

## ಭಗೀರಥರ ಜೀವನಕಥೆ ಸ್ಫೂರ್ತಿದಾಯಕ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಗರ ಮಹಾಚಕ್ರವರ್ತಿ, ದಿಲೀಪ ಮಹಾಚಕ್ರವರ್ತಿ, ಸತ್ಯಹರಿಶ್ಚಂದ್ರ, ಶ್ರೀರಾಮಚಂದ್ರ ಹೀಗೆ ಬಹಳಷ್ಟು ದೈವಾಂಶ ಸಂಭೂತರು, ಮಹಾತ್ಮರು ಸಿಗುತ್ತಾರೆ. ಅವರಲ್ಲಿ ಭಗೀರಥ ಮಹರ್ಷಿಯ ಜೀವನಕಥೆ ಸ್ಫೂರ್ತಿದಾಯಕ ಎಂದು ಕಂದಾಯ ನಿರೀಕ್ಷಕ ಎಚ್.ಎಂ. ಸೀತಿಮನಿ ಹೇಳಿದರು.

ಇಲ್ಲಿನ ಪಟ್ಟಣ ಪಂಚಾಯಿತಿಯಲ್ಲಿ ಈಚೆಗೆ ಹಮ್ಮಿಕೊಂಡಿದ್ದ ಭಗೀರಥ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ಇಕ್ಷ್ವಾಕು ವಂಶದ ಪರಂಪರೆ ಅಂದರೆ ಸೂರ್ಯವಂಶದ ಕ್ಷತ್ರಿಯರು. ಈ ಭರತಖಂಡವನ್ನು ಆಳಿದವರಲ್ಲಿ ಅನೇಕ ಖ್ಯಾತನಾಮರಿದ್ದಾರೆ. ಲೋಕ ಕಲ್ಯಾಣಕ್ಕೆ ನಿರಂತರ ಶ್ರಮವಹಿಸಿ ಯಶಸ್ಸು ಪಡೆದ ಮಹಾತ್ಮ ಮಹರ್ಷಿ ಭಗೀರಥರಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಎಸ್.ಕೆ. ದೊಡ್ಡಣ್ಣವರ, ರಮೇಶ ಹಲಗಿ, ಅಡಿವೆಪ್ಪ ಮೇಣಸಗಿ, ವಿ.ಐ. ಮಡಿವಾಳರ, ಉದಯ ಮುದೇನಗುಡಿ, ಮಹಾದೇವ ಮ್ಯಾಗೇರಿ, ಎನ್.ಬಿ. ಬೇಲೇರಿ, ಕಾವ್ಯಾ ಅರವಟಗಿಮಠ, ಪಿ.ಜಿ. ರಾಂಪೂರ, ನೀಲಪ್ಪ ಚಳ್ಳಮರದ, ಫಕ್ಕೀರೇಶ ತಮ್ಮಣ್ಣವರ, ನಿಂಗಪ್ಪ ಮಡಿವಾಳರ, ಸಿ.ವಿ. ಹೊನವಾಡ, ಜೆ.ಡಿ. ಬಂಕಾಪೂರ ಸೇರಿದಂತೆ ಇತರರು ಇದ್ದರು.

## ಮಧುಮೇಹ, ಹೃದಯ ಕಾಯಿಲೆ ಸೇರಿ 41 ಅಗತ್ಯ ಔಷಧಿಗಳ ದರ ಕಡಿತ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಹೃದಯ ಕಾಯಿಲೆಗಳು, ಮಧುಮೇಹ ಮತ್ತು ಇತರ ಸಾಮಾನ್ಯ ರೋಗಗಳಿಗೆ ಬಳಸುವ 41 ಅಗತ್ಯ ಔಷಧಿಗಳು ಬೆಲೆಯನ್ನು ಸರ್ಕಾರ ಕಡಿತಗೊಳಿಸಿದೆ.

ಮಧುಮೇಹ, ಮೈಕೈ ನೋವು, ಹೃದಯರಕ್ತನಾಳದ ಕಾಯಿಲೆಗಳು, ಯಕೃತ್ತಿನ ಸಮಸ್ಯೆಗಳು, ಆಂಟಾಸಿಡ್‌ಗಳು, ಸೋಂಕುಗಳು, ಅಲರ್ಜಿಗಳು, ಮಲ್ಟಿವಿಟಮಿನ್‌ಗಳು ಮತ್ತು ಆಂಟಿಬಯೋಟಿಕ್‌ಗಳಿಗೆ ಮೀಸಲಾದ ಔಷಧಿಗಳ ಬೆಲೆಗಳನ್ನು ಔಷಧೀಯ ಮತ್ತು ರಾಷ್ಟ್ರೀಯ ಔಷಧೀಯ ಬೆಲೆ ಪ್ರಾಧಿಕಾರದ (ಓಕಕಂ) ಅಧಿಸೂಚನೆಯ ಪ್ರಕಾರ ಕಡಿತಗೊಳಿಸಲಾಗಿದೆ.

ಔಷಧಿಗಳು ಜನರಿಗೆ ಕೈಗೆಟಕುವಂತೆ ಬೆಲೆಗಳನ್ನು ಬದಲಾಯಿಸುವುದು ಎನ್‌ಪಿಪಿಎಯಂತಹ ನಿಯಂತ್ರಕ ಸಂಸ್ಥೆಗೆ ಕೆಲಸವಾಗಿದೆ.



ಸಾರ್ವಜನಿಕರಿಗೆ ಅತ್ಯಗತ್ಯವಾಗಿರುವ ಔಷಧಿಗಳು ಕೈಗೆಟಕುವುದನ್ನು ನಾವು ಖಚಿತಪಡಿಸಿಕೊಳ್ಳುತ್ತೇವೆ. 10 ಕೋಟಿಗೂ ಹೆಚ್ಚು ಮಧುಮೇಹ ರೋಗಿಗಳನ್ನು ಹೊಂದಿರುವ ಭಾರತವು ಜಾಗತಿಕವಾಗಿ ಅತಿ ಹೆಚ್ಚು ಪ್ರಕರಣಗಳನ್ನು ಹೊಂದಿರುವ ದೇಶಗಳಲ್ಲಿ ಒಂದಾಗಿದೆ. ಈ ಬೆಲೆ ಕಡಿತವು ಔಷಧಿಗಳು ಮತ್ತು ಇನ್ಸುಲಿನ್‌ನ್ನು ಅವಲಂಬಿಸಿರುವ ಅನೇಕ ರೋಗಿಗಳಿಗೆ ಪ್ರಯೋಜನವನ್ನು ನೀಡುತ್ತದೆ ಎಂದು ಹಿರಿಯ ಎನ್‌ಪಿಪಿಎ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಔಷಧೀಯ ಬೆಲೆಗಳನ್ನು ನಿಗದಿಪಡಿಸುವ ನಿಯಂತ್ರಕ ಸಂಸ್ಥೆಯಾದ ಓಕಕಂಯ 143ನೇ ಸಭೆಯಲ್ಲಿ ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ. ಹಿಂದೆ, ಮಲ್ಟಿವಿಟಮಿನ್‌ಗಳು ಮತ್ತು ಪ್ರತಿಜೀವಕಗಳಿಗೆ ಹೆಚ್ಚಿನ ಬೆಲೆಗಳು ಸಾಮಾನ್ಯ ಚಿಕಿತ್ಸೆಯ ಬೃಹತ್ ವೆಚ್ಚಕ್ಕೆ ಕಾರಣವಾಗಿವೆ.

ಈ ವರ್ಷದ ಆರಂಭದಲ್ಲಿ, ಮಧುಮೇಹ ಮತ್ತು ಅಧಿಕ ರಕ್ತದೊತ್ತಡದಲ್ಲಿ ಬಳಸುವ 69 ಔಷಧಿಗಳ ಬೆಲೆಯನ್ನು ಓಕಕಂ ಕಡಿಮೆಗೊಳಿಸಿತ್ತು. ಹೆಚ್ಚಿನ ಉದ್ಯಮಿಗಳನ್ನು ಕರೆತರುವ ಮೂಲಕ ಔಷಧ ಮತ್ತು ವೈದ್ಯಕೀಯ ಸಾಧನಗಳ ಬೆಲೆಯನ್ನು ಸುಧಾರಿಸುವ ಪ್ರಯತ್ನಗಳನ್ನು ಮೇಲ್ವಿಚಾರಣೆ ಮಾಡಲು ಸಮಿತಿಯನ್ನು ವಿಸ್ತರಿಸಲು ಔಷಧೀಯ ಇಲಾಖೆ ನಿರ್ಧರಿಸಿದೆ. ಇಲಾಖೆಯು ಕನಿಷ್ಠ ಏಳು ಉದ್ಯಮ ಸಂಘಗಳನ್ನು ಸಮಿತಿಗೆ ಆಹ್ವಾನಿಸಿದೆ, ಇದು ಬೆಲೆ ಮತ್ತು ಅಗತ್ಯ ಔಷಧಿಗಳ ಲಭ್ಯತೆ-ಯ ನಡುವೆ ಸಮತೋಲನವನ್ನು ಸಾಧಿಸುವ ಗುರಿಯನ್ನು ಹೊಂದಿದೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರು ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಕಾಲೇಜು ಹಾಗೂ ಮುಂಡರಗಿ ತಾಲೂಕಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಕಾಲೇಜಿಗೆ 2024-25ನೇ ಸಾಲಿನಲ್ಲಿ ಪ್ರಥಮ ಪಿ.ಯು.ಸಿ. ಪ್ರವೇಶಕ್ಕೆ ತಲಾ 60 ವಿದ್ಯಾರ್ಥಿಗಳ ದಾಖಲಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಲ್ಪಸಂಖ್ಯಾತರ ಸಮುದಾಯಕ್ಕೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಪ್ರಥಮ ಪಿಯುಸಿ ಪ್ರವೇಶ ಪಡೆಯಲು ವಸತಿ ಕಾಲೇಜಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ.

ವಿಜ್ಞಾನ ವಿಷಯದಲ್ಲಿ ಪಿ.ಸಿ.ಎಂ.ಬಿ. ಪ್ರಥಮ ಪಿಯುಸಿಗೆ ದಾಖಲಾತಿ ಬಯಸುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಪ್ರತಿಶತ 75ರಷ್ಟು ಹಾಗೂ ಇತರೆ ವರ್ಗದ ವಿದ್ಯಾರ್ಥಿಗಳಿಗೆ ಪ್ರತಿಶತ 25 ರಷ್ಟು ವಿತರಿಸಲಾಗುವುದು. 10 ನೇ ತರಗತಿಯಲ್ಲಿ ಉತ್ತೀರ್ಣರಾದ ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ 2.50 ಲಕ್ಷ ಮೀರಿರದ ಅರ್ಹ ವಿದ್ಯಾರ್ಥಿಗಳು ಡಾ. ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಪದವಿ ಪೂರ್ವ ಕಾಲೇಜು,ಜಿಲ್ಲಾ ಆಸ್ಪತ್ರೆ ಹಿಂದುಗಡೆ ಮಲ್ಲಸಮುದ್ರ ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಕಾಲೇಜು, ಉಸ್ತಾದ ಪ್ಲಾಟ್ ಕೆ.ಇ.ಬಿ. ಎದುರುಗಡೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಬಹುದಾಗಿದೆ.

### ಭಕ್ತ ಹಿತ ಚಿಂತನ ಸಮಾವೇಶದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಶುದ್ಧ ಮನಸ್ಸಿನಿಂದ ಕಾಯಕ ಮಾಡಿ

■ ವಿಜಯಸಾಕ್ಷಿ ಸುದ್ದಿ, ಕಲಬುರ್ಗಿ

ಭಾವೈಕ್ಯತೆ ಮತ್ತು ಆಧ್ಯಾತ್ಮ ಜ್ಞಾನ ಭಾರತದ ಉಸಿರು. ಭಾರತೀಯ ಸಂಸ್ಕೃತಿ ಎಲ್ಲರನ್ನು ಒಗ್ಗೂಡಿಸುವುದೇ ಆಗಿದೆ ಹೊರತು ವಿಘಟಿಸುವುದಲ್ಲ. ಶುದ್ಧ ಮನಸ್ಸಿನಿಂದ ಖಾದಿ-ಖಾಕಿ-ಖಾವಿ ಕಾಯಕ ಮಾಡಿದರೆ ಜನಕಲ್ಯಾಣದ ಜೊತೆಗೆ ಲೋಕ ಕಲ್ಯಾಣವಾಗುವುದರಲ್ಲಿ ಯಾವುದೇ ಸಂದೇಹವಿಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಸಂಜೆ ತಾಲೂಕಿನ ಶ್ರೀನಿವಾಸ ಸರಡಗಿ ಚಿನ್ನದಕಂತಿ ಚಿಕ್ಕವೀರೇಶ್ವರ ಸಂಸ್ಥಾನ ಹಿರೇಮಠದ ಡಾ.ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳವರ ಷಷ್ಟಿಪೂರ್ತಿ ಅಂಗವಾಗಿ ಜರುಗಿದ ಭಕ್ತ ಹಿತ ಚಿಂತನ ಸಮಾವೇಶದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸ್ವಾರ್ಥರಹಿತ ಬದುಕಿಗೆ ಬೆಲೆಯಿದೆ ಮತ್ತು ಬಲವಿದೆ. ಹಿರಿಯರ ಮೌಲ್ಯಾಧಾರಿತ ಚಿಂತನಗಳು ಬಾಳಿನ ಆಶಾಕಿರಣವಾಗಿವೆ. ಧರ್ಮ ಮತ್ತು ಧರ್ಮಾಚರಣೆ ಮರೆತರೆ ಅಪಾಯ ತಪ್ಪಿದ್ದಲ್ಲ. ಶಸ್ತ್ರ ಪ್ರಭುತ್ವ ಮತ್ತು ಅರ್ಥಗಳು ಅಜ್ಞಾನಿಯ ಕೈಯಲ್ಲಿದ್ದರೆ ಸರ್ವನಾಶ. ಅದೇ ಸಜ್ಜನರ ಕೈಯಲ್ಲಿದ್ದರೆ ಜನಹಿತಾತ್ಮಕ ಕಾರ್ಯಗಳು ನಡೆಯುತ್ತವೆ. ಸಮಾಜದ ಓರೆ-ಕೋರೆಗಳನ್ನು ತಿದ್ದಿ ತೀಡಿ ಮುನ್ನಡೆಸುವುದೇ ಗುರುವಿನ ಧರ್ಮವಾಗಿದೆ. ಪ್ರಾಪಂಚಿಕ ಸಂಬಂಧಗಳು ಕೆಲವು ಸಂದರ್ಭಗಳಲ್ಲಿ ಕೆಡಬಹುದು. ಆದರೆ ಗುರು ಶಿಷ್ಯರ ಸಂಬಂಧ ಚಿರಂತನ ಮತ್ತು ನಿತ್ಯ ನೂತನ.



ನೇತೃತ್ವ ವಹಿಸಿದ ಶ್ರೀನಿವಾಸ ಸರಡಗಿಯ ಡಾ. ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜೀವನದಲ್ಲಿ ಬದಲಾವಣೆ ಮತ್ತು ಬೆಳವಣಿಗೆ ಎರಡೂ ಬೇಕು. ಬಾಲ್ಯದಲ್ಲಿ ಜ್ಞಾನ, ಯೌವನದಲ್ಲಿ ಸಂಪತ್ತು ಮತ್ತು ವೃದ್ಧಾಪ್ಯದಲ್ಲಿ ಪುಣ್ಯ ಸಂಪಾದಿಸಿಕೊಂಡು ಬಾಳುವುದು ಶ್ರೇಷ್ಠ. ಸುಳ್ಳಿಗೆ, ಮೋಸಕ್ಕೆ ಹಲವು ದಾರಿ. ಆದರೆ ಧರ್ಮಕ್ಕೊಂದೇ ದಾರಿ. ಅದುವೇ ಹೆದ್ದಾರಿ. ಯುವ ಜನಾಂಗದಲ್ಲಿ ಅದ್ಭುತ ಶಕ್ತಿಯಿದೆ. ಆ ಶಕ್ತಿ ಜನ ಹಿತಕ್ಕಾಗಿ ಮೀಸಲಾಗಿರಲಿ. ಸಮಾಜದಲ್ಲಿ ಬೆಳೆಯುತ್ತಿರುವ ದುಷ್ಟ ಶಕ್ತಿಗಳು ನಿರ್ನಾಮಗೊಂಡು ಸಾತ್ವಿಕ ಸಮಾಜ ಕಟ್ಟಿ ಬೆಳೆಸುವ ಸಂಕಲ್ಪ ಎಲ್ಲರದಾಗಲಿ. ಶ್ರೀ ರಂಭಾಪುರಿ ಜಗದ್ಗುರುಗಳವರ ಅಶೀರ್ವಾದ ನಮ್ಮ ನಿಮ್ಮೆಲ್ಲರ ಮೇಲೆ ಸದಾ ಇರಲೆಂದರು.

ಸಮಾರಂಭದಲ್ಲಿ ಹೊನ್ನಕಿರಣಗಿ ಚಂದ್ರಗುಂಡ ಶಿವಾಚಾರ್ಯರು ಮತ್ತು ಆಲಮೇಲ ಚಂದ್ರಶೇಖರ ಶಿವಾಚಾರ್ಯರು ಉಪದೇಶಾಮೃತವನ್ನಿತ್ತರು. ಕಲಬುರ್ಗಿ ಡಾ.ರಾಜಶೇಖರ ಶಿವಾಚಾರ್ಯರು, ತೊನಸನಹಳ್ಳಿ ರೇವಣಸಿದ್ಧ ಚರಂತೇಶ್ವರ ಶಿವಾಚಾರ್ಯರು, ಯಂಕಂಚಿ ರುದ್ರಮುನಿ ಶಿವಾಚಾರ್ಯರು, ಓಂಕಾರ ಬೆನ್ನೂರು ಸಿದ್ಧ-ರೇಣುಕ ಶಿವಾಚಾರ್ಯರು, ಮಳಖೇಡ ಅಭಿನವ ಕಾರ್ತಿಕೇಶ್ವರ ಶಿವಾಚಾರ್ಯರು, ಹಲಕರಟಿ ರಾಜಶೇಖರ ಶಿವಾಚಾರ್ಯರು, ಆಳಂದ ಸಿದ್ಧಲಿಂಗ ಶಿವಾಚಾರ್ಯರು, ಮುಳವಾಡ ಸಿದ್ಧಲಿಂಗ ಶಿವಾಚಾರ್ಯರು, ಹನುಮಾಪುರ ಸೋಮಶೇಖರ ಶಿವಾಚಾರ್ಯರು, ಸರಡಗಿ ವೀರಭದ್ರ ಶಿವಾಚಾರ್ಯರು, ಗಿರೆಪ್ಪಾ ಮುತ್ಯಾ, ರಾಜು ಭೀಮಳ್ಳಿ, ಶಿವಶರಣಪ್ಪ ಸೀರಿ ಮೊದಲಾದ ಗಣ್ಯರು ಉಪಸ್ಥಿತರಿದ್ದರು.

ಗುರುಲಿಂಗಯ್ಯ ಹಿತ್ತಲಶಿರೂರು ಇವರಿಂದ ಪ್ರಾರ್ಥನಾ ಗೀತೆ ಜರುಗಿತು. ಹಣಮಂತ್ರಾಯ ಅಟ್ಟೂರು ಸ್ವಾಗತಿಸಿದರು. ನಾಗಲಿಂಗಯ್ಯ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಸ್ಟೇಷನ್ ಬಬಲಾದ ಬಾಳೆಹೊನ್ನೂರು ಖಾಸಾ ಶಾಖಾ ಮಠದ ಶಿವಮೂರ್ತಿ ಶಿವಾಚಾರ್ಯರು ನಿರೂಪಿಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವನ ವಿಕಾಸಗೊಳ್ಳಲು ಧರ್ಮದ ದಶ ಸೂತ್ರಗಳನ್ನು ಬೋಧಿಸಿದ್ದಾರೆ. ಅವರ ವಿಚಾರ ಧಾರೆಗಳು ಜೀವನ ವಿಕಾಸಕ್ಕೆ ಭದ್ರ ಅಡಿಪಾಯವಾಗಿವೆ. ಡಾ.ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಎಲ್ಲೆಡೆ ಸಂಚರಿಸಿ ವೀರಶೈವ ಧರ್ಮ ಸಂಸ್ಕೃತಿಯನ್ನು ಪಸರಿಸುವ ಮೂಲಕ ಜನ ಸಮುದಾಯವನ್ನು ಜಾಗೃತಗೊಳಿಸುತ್ತಿರುವುದು ಸಂತೋಷದ ಸಂಗತಿ. ಇಂದು ಷಷ್ಟಿಪೂರ್ತಿ ಆಚರಿಸಿಕೊಳ್ಳುತ್ತಿರುವ ಶ್ರೀಗಳು ಮುಂದೊಂದು ದಿನ ಅಮೃತ ಮಹೋತ್ಸವ ಆಚರಿಸಿಕೊಳ್ಳುವ ಸೌಭಾಗ್ಯ ಪ್ರಾಪ್ತವಾಗಲೆಂದು ಡಾ. ವೀರಸೋಮೇಶ್ವರ ಜಗದ್ಗುರುಗಳು ಶುಭ ಹಾರೈಸಿದರು.

## 'ಮಾವು ಮೇಳ' ಮೇ 19ರವರೆಗೆ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಮೇ 14ರಿಂದ ಮೇ 16ರವರೆಗೆ 2024-25ನೇ ಸಾಲಿನ ಮಾವು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ತೋಟಗಾರಿಕೆ ಇಲಾಖೆಯ ಆವರಣದಲ್ಲಿ ಆಯೋಜಿಸಲಾಗಿದ್ದು, ಮಾವು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಉತ್ತಮ ಸ್ಪಂದನೆ ದೊರಕಿದ್ದು, ರೈತರಿಗೆ ಒಳ್ಳೆ ಲಾಭವಾಗುತ್ತಿದೆ.

ಗ್ರಾಹಕರಿಂದ ಉತ್ತಮ ಪ್ರತಿಕ್ರಿಯೆ ದೊರಕಿದ್ದು, ಮೇಳವನ್ನು ಮುಂದುವರೆಸಲು ಹೆಚ್ಚಿನ ಬೇಡಿಕೆ ಇರುವುದರಿಂದ ಮೇ 19ರವರೆಗೆ ವಿಸ್ತರಿಸಲಾಗಿದೆ ಎಂದು ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಠಗಳು ಜೀವಂತ ಮಂದಿರಗಳಿದ್ದಂತೆ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಬಸವಣ್ಣನವರ ತತ್ವ-ಸಿದ್ಧಾಂತಗಳನ್ನು ಅಳವಡಿಸಿಕೊಂಡು, ಸಮಾಜದಲ್ಲಿ ಅನಿಷ್ಠ ಪದ್ಧತಿಗಳನ್ನು ಹೋಗಲಾಡಿಸಿದ ಮಹಾನ್ ಸಂತ ಚನ್ನವೀರ ಸ್ವಾಮಿಗಳು ಎಂದು ಮುಂಡರಗಿಯ ಡಾ.ನಾಡೋಜ ಶ್ರೀ ಅನ್ನದಾನೇಶ್ವರ ಮಹಾಶಿವಯೋಗಿಗಳು ತಿಳಿಸಿದರು.

ತಾಲೂಕಿನ ಅರಸನಾಳು ಗ್ರಾಮದ ಜಂಗಮ ಕ್ಷೇತ್ರ ಲಿಂಗನಾಯಕನಹಳ್ಳಿ ಚನ್ನವೀರಸ್ವಾಮಿ ಶಾಖಾಮಠದ ಜೀರ್ಣೋದ್ಧಾರ ಕಾರ್ಯಕ್ರಮ ಹಾಗೂ ಪುರಾಣ ಮಂಗಲೋತ್ಸವ, ಸಾಮೂಹಿಕ ವಿವಾಹ ಕಾರ್ಯಕ್ರಮಗಳ ನೇತೃತ್ವ ವಹಿಸಿ ಅವರು ಮಾತನಾಡಿದರು.

ಮನುಷ್ಯನು ಯಾವುದೇ ಕೆಲಸ-ಕಾರ್ಯಗಳಲ್ಲಿ ತೊಡಗಿ-ಕೊಂಡು ನಿಷ್ಠೆ, ಶ್ರದ್ಧಾ ಭಕ್ತಿಯಿಂದ ನಿರ್ವಹಿಸಿದಲ್ಲಿ ಭಗವಂತನ ಕೃಪೆಗೆ ಪಾತ್ರನಾಗುತ್ತಾನೆ. ಚನ್ನವೀರಸ್ವಾಮಿಗಳು ಸಮಾಜದಲ್ಲಿನ ಅನಿಷ್ಠ ಪದ್ಧತಿಗಳನ್ನು ಹೋಗಲಾಡಿಸಿ, ಸರ್ವಧರ್ಮೀಯರ ಸಮಾನತೆಯನ್ನು ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ ಶರಣರಾಗಿದ್ದಾರೆ ಎಂದರು.

ಗುಡ್ಡದ ವಿರಕ್ತ ಮಠ ಚನ್ನಬಸವ ಶಿವಯೋಗಿ ಸ್ವಾಮಿಗಳು ಮಾತನಾಡಿ, ಮಠಗಳೆಂದರೆ ಜೀವಂತ ಮಂದಿರಗಳಿದ್ದಂತೆ. ನಾಡಿನಲ್ಲಿ ಸಾವಿರಾರು ಮಠಗಳು ಉಚಿತವಾಗಿ ಶಿಕ್ಷಣ ಮತ್ತು ಅನ್ನದಾಸೋಹಗಳನ್ನು ನಡೆಸುತ್ತಾ ದೀನ-ದಲಿತ ಮಕ್ಕಳ ಬಾಳಿಗೆ ಬೇಳಕನ್ನು ನೀಡುತ್ತಾ ಬಂದಿವೆ ಎಂದರು.

ವಕೀಲ ಪ್ರಕಾಶ ಪಾಟೀಲ್ ಮಾತನಾಡಿ, ಒಂದೂವರೆ ವರ್ಷಗಳ ಸತತ ಪ್ರಯತ್ನ ಮತ್ತು ಊರಿನ ಎಲ್ಲಾ ಸಮಾಜದವರ ಸಹಕಾರದಿಂದ, ರೂ.65 ಲಕ್ಷಕ್ಕೂ ಅಧಿಕ ಖರ್ಚಿನೊಂದಿಗೆ ಚನ್ನವೀರಸ್ವಾಮಿಗಳ ದೇವಸ್ಥಾನವು ಯಶಸ್ವಿಯಾಗಿ ಸಿದ್ಧವಾಗಿದೆ. ಇಂತಹ ಧಾರ್ಮಿಕ ಕಾರ್ಯದಲ್ಲಿ ಕಡು ಬಡವನಾದರೂ ದೇವಸ್ಥಾನ ನಿರ್ಮಾಣಕ್ಕಾಗಿ 45 ಸಾವಿರ ರೂ.ಗಳನ್ನು ದೇಣಿಗೆ ನೀಡಿದ್ದಾನೆ ಎಂದು ದಾನಿ ಲಕ್ಕಪ್ಪ ಅವರನ್ನು ಸ್ಮರಿಸಿದರರು.

ವೇದಿಕೆಯಲ್ಲಿ ಗುಡ್ಡದ ವಿರಕ್ತ ಮಠ ಚನ್ನಬಸವ ಶಿವಯೋಗಿ ಸ್ವಾಮಿ, ಚನ್ನವೀರ ಶಿವಯೋಗಿ ಸ್ವಾಮಿ ಲಿಂಗನಾಯಕನಹಳ್ಳಿ, ಶಾಂತಲಿಂಗ ದೇಶೀಕೇಂದ್ರ ಸ್ವಾಮಿಗಳು ಅರಸೀಕೆರೆ, ಶಿವಕುಮಾರ ಸ್ವಾಮಿ ದಳವಾಹಿಮಠ ಹಾವನೂರು, ಶ್ರೀಕಾಂತರೆಡ್ಡಿ, ಹೆಚ್. ರುದ್ರಪ್ಪ, ಗಿರಿರಾಜರೆಡ್ಡಿ, ಶ್ರೀಧರ, ಡಿ. ವಿಠೋಬಪ್ಪ, ಬಸವರಾಜಪ್ಪ ಬಣಕಾರ, ಕೂಭ್ಯಾನಾಯ್ಕ, ಪ್ರಭಾವತಿ ಕೃಷ್ಣ ಪಾಟೀಲ್, ಜಗನ್ನಾಥ ರೆಡ್ಡಿ ಮುಂತಾದವರಿದ್ದರು.

## RMSS ನರ್ಸಿಂಗ್ ಕಾಲೇಜಿನಲ್ಲಿ ಪ್ರಥಮ ಚಿಕಿತ್ಸಾ ಕಾರ್ಯಾಗಾರ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹುಲಕೋಟಿಯ RMSS ನರ್ಸಿಂಗ್ ಕಾಲೇಜಿನಲ್ಲಿ ವಿಶ್ವ ಶುಶ್ರೂಷಕರ ದಿನಾಚರಣೆಯ ಅಂಗವಾಗಿ ಸ್ಟಾರ್ ಹೆಲ್ತ್ ಅಕಾಡೆಮಿ ವತಿಯಿಂದ ಪ್ರಥಮ ಚಿಕಿತ್ಸಾ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಸ್ಟಾರ್ ಹೆಲ್ತ್ ಅಕಾಡೆಮಿಯ ಶಶಿಕುಮಾರ ಎಚ್.ಎಸ್., ತುರ್ತು ವೈದ್ಯಕೀಯ ಸೇವೆಯ ಕುರಿತು ಸವಿವರ ಮಾಹಿತಿ ನೀಡಿದರು. ಕಾರ್ಡಿಯಾಕ್ ಅರೆಸ್ಟ್ ಮತ್ತು ಹೃದಯಾಘಾತಕ್ಕಿರುವ ವ್ಯತ್ಯಾಸ, ಹಾವು ಕಡಿತಕ್ಕೆ ಒಳಪಟ್ಟ ವ್ಯಕ್ತಿ, ವಿಷ ಸೇವಿಸಿದ ವ್ಯಕ್ತಿಯ ದೇಹದಿಂದ ವಿಷವನ್ನ ಹೊರತೆಗೆಯಲು ಪ್ರಥಮವಾಗಿ ಹೇಗೆ ಚಿಕಿತ್ಸಿಸಬೇಕು ಎಂದು ಸವಿವರವಾಗಿ ಅರ್ಥೈಸಿದರು. ಸಿಬ್ಬಂದಿಗಳಾದ ರವಿಕುಮಾರ, ವಿವೇಕ ಪ್ರಥಮ ಚಿಕಿತ್ಸೆಯ ಕುರಿತು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಎಸ್.ಆರ್. ನಾಗನೂರ ತಮ್ಮ ಅನುಭವವನ್ನು ಹಂಚಿಕೊಂಡರು. ಸಹಾಯಕ ಪ್ರಾಧ್ಯಾಪಕ ಸ್ಟೀಫನ್ ಜಾನ್, ವಿದ್ಯಾಧರ ಗೌರಮ್ಮ ಕಾರ್ಯಾಗಾರದ ಕುರಿತು ಅಭಿನಂದನೆ ವ್ಯಕ್ತಪಡಿಸಿದರು. RMSS ಕಾಲೇಜಿನ ಪ್ರಾಂಶುಪಾಲ ಬಸಯ್ಯ ಹಿರೇಮಠ, ಸಹ ಪ್ರಾಧ್ಯಾಪಕರು ಕಾರ್ಯಾಗಾರದಲ್ಲಿದ್ದರು.



ಹುಬ್ಬಳ್ಳಿಯಲ್ಲಿ ಇತ್ತೀಚೆಗೆ ದುಷ್ಕರ್ಮಿಯಿಂದ ಹತ್ಯೆಗೀಡಾದ ಅಂಜಲಿ ಅವರ ಮನೆಗೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಗುರುವಾರ ಭೇಟಿ ನೀಡಿ, ಅವರ ಕುಟುಂಬದವರಿಗೆ ಸಾಂತ್ವನ ಹೇಳಿದರು.

## ತಡರಾತ್ರಿ ಸಂಚಾರಕ್ಕೆ ಬಸ್ ಸೌಲಭ್ಯ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ-ಧಾರವಾಡ ಮಾರ್ಗದಲ್ಲಿ ಹುಬ್ಬಳ್ಳಿ ರೈಲ್ವೆ ನಿಲ್ದಾಣದಿಂದ ಧಾರವಾಡಕ್ಕೆ ತಡರಾತ್ರಿ ಸಂಚಾರದ ಅನುಕೂಲತೆಗಾಗಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಿಂದ ಹುಬ್ಬಳ್ಳಿ ರೈಲ್ವೆ ನಿಲ್ದಾಣದ ಬಿ.ಆರ್.ಟಿ.ಎಸ್ ನಿಲುಗಡೆಯಿಂದ ಧಾರವಾಡಕ್ಕೆ ಪ್ರತಿದಿನ ರಾತ್ರಿ 11:15 ಹಾಗೂ 11:30 ಕ್ಕೆ ಮತ್ತು 11:45 ಕ್ಕೆ ನಿರ್ಗಮಿಸುವಂತೆ ನಗರ ಸಾರಿಗೆ ಬಸ್ಸುಗಳನ್ನು ಮೇ 16ರಿಂದ ಕಾರ್ಯಾಚರಣೆ ಪ್ರಾರಂಭಿಸಲಾಗಿದೆ.

ಸದರಿ ವಾಹನಗಳು ನಾನ್ ಬಿ.ಆರ್.ಟಿ.ಎಸ್ ಕಾರಿಡಾರ್(ಮಿಶ್ರಪಥ) ದಲ್ಲಿ ಕಾರ್ಯಾಚರಿಸುತ್ತವೆ. ಸಾರ್ವಜನಿಕ ಪ್ರಯಾಣಿಕರು ಸದರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ಸಂಸ್ಥೆಯ ಮಾನ್ಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ.ಎಂ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿಮ್ಹಾನ್ಸ್ ಸಂಸ್ಥೆಯಲ್ಲಿ ಅಂತಾರಾಷ್ಟ್ರೀಯ ಶುಶ್ರೂಷಕರ ದಿನ ಆಚರಣೆ

# ದೀಪಧಾರಿಣಿ ಮಹಿಳೆಯ ಕಾರ್ಯ ಶ್ಲಾಘನೀಯ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕ್ರಿಮಿಯನ್ ಯುದ್ಧದಲ್ಲಿ ಗಾಯಗೊಂಡ ರೋಗಿಗಳಿಗೆ ದೀಪವನ್ನು ಹಿಡಿದು ಆರೈಕೆ ಮಾಡಿ ಸಾವಿನಂಚಿನಲ್ಲಿ ನರಳುತ್ತಿದ್ದ ರೋಗಿಗಳನ್ನು ಫ್ಲಾರೆನ್ಸ್ ನೈಟಿಂಗೇಲ್ ಅವರ ಸೇವೆಯ ಮೂಲಕ ಎಷ್ಟೋ ಜನ ಸೈನಿಕರ ಪ್ರಾಣವನ್ನು ಉಳಿಸಲು ಹಗಲಿರುಳು ಸೇವೆಯನ್ನು ಸಲ್ಲಿಸಿದರು. ಈ ದೀಪಧಾರಿಣಿ ಮಹಿಳೆಯ ಕಾರ್ಯ ಶ್ಲಾಘನೀಯವಾಗಿದೆ ಎಂದು ಡಿಮ್ಹಾನ್ಸ್ ಸಂಸ್ಥೆಯ ನಿರ್ದೇಶಕ ಡಾ. ಅರುಣ್ ಕುಮಾರ್ ಸಿ. ಹೇಳಿದರು.




ಅವರು ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಸಂಸ್ಥೆ (ಡಿಮ್ಹಾನ್ಸ್) ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಶುಶ್ರೂಷಕರ ದಿನಾಚರಣೆಯಲ್ಲಿ ಫ್ಲಾರೆನ್ಸ್ ನೈಟಿಂಗೇಲ್‌ರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಮಾತನಾಡಿದರು.

ಶುಶ್ರೂಷಕರು ಆಸ್ಪತ್ರೆಗಳ ಆಧಾರ ಸ್ಥಂಭಗಳಂತೆ. ದಿನದ 24 ಗಂಟೆಗಳೂ ಶುಶ್ರೂಷಕರು ನಿಸ್ವಾರ್ಥ ಮನೋಭಾವದಿಂದ ರೋಗಿಗಳ ಆರೈಕೆ ಮಾಡುವಲ್ಲಿ ಮುಖ್ಯ ಪಾತ್ರ ವಹಿಸುತ್ತಾರೆ. ಸಮುದಾಯದಿಂದ ಹಿಡಿದು ಉನ್ನತ ದರ್ಜೆ ಆಸ್ಪತ್ರೆಗಳ ಎಲ್ಲಾ ವಿಭಾಗಗಳಲ್ಲಿ ಸೇವೆ ಸಲ್ಲಿಸುವ ಎಲ್ಲಾ ಶುಶ್ರೂಷಕರ ಸೇವೆ ಅತಿ ಮುಖ್ಯವಾದದ್ದು ಎಂದರು.

ಡಿಮ್ಹಾನ್ಸ್‌ನ ವೈದ್ಯಕೀಯ ಅಧಿಕಾರಿ ಡಾ. ರಾಘವೇಂದ್ರ ನಾಯಕ್ ಮಾತನಾಡಿ, ರೋಗಿಗಳ ಸೇವೆಯಲ್ಲಿ ಶುಶ್ರೂಷಕರ ಕಾರ್ಯ ಅಮೋಘವಾದದ್ದು. ವೈದ್ಯಕೀಯ ಸೇವೆಯ ಪ್ರಗತಿಯಲ್ಲಿ ಸದಾ ರೋಗಿಗಳ ಸೇವೆಯನ್ನು ಮಾಡುವ ಶುಶ್ರೂಷಕ ಅಧಿಕಾರಿಗಳ ಪಾತ್ರ ಹಿರಿದಾದದು ಎಂದು ಅಭಿನಂದನೆಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಡಿಮ್ಹಾನ್ಸ್‌ನ ಶುಶ್ರೂಷಾಧೀಕ್ಷಕರಾದ ಗಾಯತ್ರಿ ಶಿಂಧೆ, ಪ್ರಶಾಂತ ಬೇವೂರು, ಸೈಕಿಯಾಟ್ರಿಕ್ ನರ್ಸಿಂಗ್ ವಿಭಾಗದ ಮುಖ್ಯಸ್ಥರು ಹಾಗೂ ಪ್ರಾಧ್ಯಾಪಕರಾದ ಡಾ. ಶ್ರೀವಾಣಿ ಆರ್. ಉಪಸ್ಥಿತರಿದ್ದರು. ಸಿದ್ಧಾರ್ಥ ಕಾಲೇಜ್ ಆಫ್ ನರ್ಸಿಂಗ್ ವಿದ್ಯಾರ್ಥಿನಿಯರು ನೃತ್ಯ ಪ್ರದರ್ಶಿಸಿದರು. ಸವಿತಾ ಘೋರ್ಪಡೆ ಸ್ವಾಗತಿಸಿದರು. ಹನುಮಂತ ಮುದೇವ್ವಗೊಳ ಕಾ೦ರ್ರ್ಕ್ರವ್ರವ್ನ್ರ್ ನಿರೂಪಿಸಿದರು. ನೆಹರು ಹೆಚ್. ಜೆ ಸ್ವ ರಚಿತ ಗೀತೆಯೊಂದಿಗೆ ವಂದಿಸಿದರು. ಆಸ್ಪತ್ರೆಯ ಎಲ್ಲಾ ಶುಶ್ರೂಷಾಧಿಕಾರಿಗಳು, ನರ್ಸಿಂಗ್ ವಿದ್ಯಾರ್ಥಿಗಳು, ಸರ್ವ ಸಿಬ್ಬಂದಿಗಳು ಭಾಗವಹಿಸಿದ್ದರು.

ಡಾ.ಶ್ರೀಧರ ಕುಲಕರ್ಣಿ ಮಾತನಾಡಿ, ರೋಗಿಗಳು ಆಸ್ಪತ್ರೆಗಳಲ್ಲಿ ದಾಖಲಾಗಿ ಗುಣಮುಖ ಹೊಂದಿ ಸಮಾಜದಲ್ಲಿ ಎಲ್ಲರ ಜೊತೆ ಬೆರೆಯಲು ಶುಶ್ರೂಷಕರ ಸೇವೆ ಅತಿ ಮುಖ್ಯವಾದದ್ದು. ಶುಶ್ರೂಷಕರ ಸೇವೆ ಇಲ್ಲದೇ ಯಾವುದೇ ಆಸ್ಪತ್ರೆಗಳನ್ನು ನಡೆಸುವುದು ಸಾಧ್ಯವಿಲ್ಲ ಎಂದು ಹೇಳಿದರು.

### ಜೀವನ ಕೌಶಲ್ಯಗಳ ತರಬೇತಿ ಕಾರ್ಯಾಗಾರದಲ್ಲಿ ಕವಿತಾ ಕುರುಗೋಡ

# ಕೌಶಲ್ಯ ತರಬೇತಿಗಳಿಂದ ಜ್ಞಾನಾಭಿವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ವಿದ್ಯಾರ್ಥಿಗಳು ವ್ಯಾಸಂಗದ ಜೊತೆಗೆ ಜೀವನ ಕೌಶಲ್ಯ ತರಬೇತಿಗಳನ್ನು ಪಡೆಯುವ ಮೂಲಕ ಜ್ಞಾನಾಭಿವೃದ್ಧಿಯನ್ನು ಹೆಚ್ಚಿಸಿಕೊಳ್ಳಬೇಕು ಎಂದು ಯುವ ಸ್ಪಂದನದ ಯುವ ಪರಿವರ್ತಕ ಕವಿತಾ ಕುರುಗೋಡ ತಿಳಿಸಿದರು.




ಅವರು ಗುರುವಾರ ಧಾರವಾಡದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಪಿಜಿ ಕೇಂದ್ರ ವಿದ್ಯಾರ್ಥಿ ಕಲ್ಯಾಣ ಸಮಿತಿ ಮತ್ತು ರಾಷ್ಟ್ರೀಯ ಸೇವಾ ಯೋಜನ ಘಟಕಗಳು ಹಾಗೂ ಎಸ್‌ಎಫ್‌ಯು ಯುವ ಸ್ಪಂದನ ಕೇಂದ್ರದ ಸಹಯೋಗದಲ್ಲಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಜೀವನ ಕೌಶಲ್ಯಗಳ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತಾಡಿದರು.

ವ್ಯಕ್ತಿಯ ವ್ಯಕ್ತಿತ್ವವನ್ನು ರೂಪಿಸುವಲ್ಲಿ ಜೀವನ ಕೌಶಲ್ಯ ತರಬೇತಿ ನೇರವಾಗಲಿದೆ. ಅಂತಹ ವ್ಯಕ್ತಿತ್ವವನ್ನು ಸಂವಹನ ಕಲೆ, ಸಂಯೋಜನ ಕಲೆ ಹಾಗೂ ಕಲಿಯುವ ಇಚ್ಛೆಯನ್ನು ಆಧರಿಸಿ ರೂಪಿಸಲಾಗಿದೆ. ಹೊಸ ಜೀವನ ಕಲೆಯನ್ನು ಕಲಿಯುವ ಜೊತೆಗೆ ನಮ್ಮ ಸುತ್ತಮುತ್ತಲಿನ ಪ್ರಪಂಚದ ಬಗ್ಗೆ ಅರಿತುಕೊಂಡು ಹೊಸ ಅಧ್ಯಯದತ್ತ ಮುಖ ಮಾಡಬೇಕಾದ ಅನಿವಾರ್ಯತೆಯಿದ್ದು, ಇಂದಿನ ಯುವ ಪೀಳಿಗೆಗೆ ಜೀವನ ಕೌಶಲ್ಯ ತರಬೇತಿ ಅವಶ್ಯಕವಾಗಿದೆ. ವಿದ್ಯಾರ್ಥಿಗಳು ಶಿಕ್ಷಣದ ಜೊತೆಯಲ್ಲಿಯೇ ಹಲವು ತರಬೇತಿಗಳನ್ನು ಪಡೆದುಕೊಂಡು ಜೀವನ ರೂಪಿಸಿಕೊಳ್ಳುವ ಜೊತೆಗೆ ತಮ್ಮ ಬದುಕನ್ನು ಉತ್ತಮಗೊಳಿಸಲು ಸಹಕಾರಿಯಾಗಲಿದೆ ಎಂದರು.

ಕೌಶಲ್ಯ ತರಬೇತಿದಾರರಾದ ಬಿ.ಪಿ. ಪಾರಿಶ್ವಾಡ ಮಾತನಾಡಿ, ಇಂದು ಸ್ಪರ್ಧಾತ್ಮಕ ಜಗತ್ತಿನಲ್ಲಿ ಯುವ ಪೀಳಿಗೆಗೆ ಪ್ರತಿಯೊಂದು ತರಬೇತಿ ಅತ್ಯಅವಶ್ಯಕವಾಗಿದೆ. ಇದರಿಂದ ವಿಮುಖರಾಗದೆ ಜೀವನ ಕಲಿಕೆಯ ಅಂಗವಾಗಿ ರೂಪಿಸಿಕೊಂಡು ಇತರರಿಗೆ ಮಾದರಿಯಾಗಬೇಕೆಂದು ತಿಳಿಸಿದರು.

ಪ್ರಾಂಶುಪಾಲರಾದ ಪ್ರೊ. ನಳಿನ ಬೆಂಗೇರಿ ಸಮಾಂಭದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಾಗಾರದಲ್ಲಿ ಡಾ. ಜಿ.ಕೆ ಬಡಿಗೇರ, ಡಾ. ಜಯಾನಂದ ಹಟ್ಟಿ, ಎನ್.ಎಸ್. ಆಫೀಸರ್ ಭರಮಗೌಡ, ಪಿ.ಕೆ. ಗೆಜ್ಜಿ, ಬಿ.ಎಸ್. ಪಾಟೀಲ, ಲತಾ ಕಿಲ್ಲೇದಾರ, ಈರಣ್ಣ ಬಸ್ತಾಳಿ ಸೇರಿದಂತೆ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಡಾ.ಶ್ರೀಧರ ಕುಲಕರ್ಣಿ ಮಾತನಾಡಿ, ರೋಗಿಗಳು ಆಸ್ಪತ್ರೆಗಳಲ್ಲಿ ದಾಖಲಾಗಿ ಗುಣಮುಖ ಹೊಂದಿ ಸಮಾಜದಲ್ಲಿ ಎಲ್ಲರ ಜೊತೆ ಬೆರೆಯಲು ಶುಶ್ರೂಷಕರ ಸೇವೆ ಅತಿ ಮುಖ್ಯವಾದದ್ದು. ಶುಶ್ರೂಷಕರ ಸೇವೆ ಇಲ್ಲದೇ ಯಾವುದೇ ಆಸ್ಪತ್ರೆಗಳನ್ನು ನಡೆಸುವುದು ಸಾಧ್ಯವಿಲ್ಲ ಎಂದು ಹೇಳಿದರು.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ ನೇರವಾಗಿ 02ನೇ ವರ್ಷದ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಪ್ರವೇಶಕ್ಕಾಗಿ 32 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಗಣಿತ, ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರದೊಂದಿಗೆ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಅಥವಾ ಯಾವುದೇ ಜವಳಿ ವಿಭಾಗದ ವೃತ್ತಿಪರ ವಿಭಾಗದಲ್ಲಿ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಅಥವಾ 10ನೇ ತರಗತಿ ತೇರ್ಗಡೆ ಜೊತೆಗೆ 2 ವರ್ಷಗಳ ಐಟಿಐ ತೇರ್ಗಡೆಯಾದ ವಿದ್ಯಾರ್ಥಿಗಳು ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ-ಬೆಟಗೇರಿಯಲ್ಲಿ ಲಭ್ಯವಿರುವ 13 ಸೀಟುಗಳಿಗೆ, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) ಲಭ್ಯವಿರುವ 14 ಸೀಟುಗಳಿಗೆ, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) ಲಭ್ಯವಿರುವ 3 ಸೀಟುಗಳಿಗೆ, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) ಲಭ್ಯವಿರುವ 2 ಸೀಟುಗಳಿಗೆ, ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್ ಪ್ರವೇಶಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

ಜವಳಿ ವಿಭಾಗದ ವೃತ್ತಿಪರ ಸ್ಕೀಮ್‌ನಲ್ಲಿ 10+2 ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಐ.ಐ.ಹೆಚ್.ಟಿ ನಡೆಸುವ ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರದಲ್ಲಿ ಬ್ರಿಡ್ಜ್ ಕೋರ್ಸ್‌ನ್ನು ಅಭ್ಯಾಸ ಮಾಡಬೇಕು.

ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500/- ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಆಯ್ಕೆಯಾದ ಅಭ್ಯರ್ಥಿಗಳಿಗೆ ಆಯಾ ಐ.ಐ.ಹೆಚ್.ಟಿ. ನಿಯಮಾನುಸಾರ ವಸತಿ ನಿಲಯದ ಸೌಲಭ್ಯವನ್ನು ಕಲ್ಪಿಸಲಾಗುವುದು.

ಜುಲೈ 1, 2024 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ವಯೋಮಿತಿ 25 ವರ್ಷ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ವಯೋಮಿತಿ 27 ವರ್ಷ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಡೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ. ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು.

ಆಸಕ್ತ ಅಭ್ಯರ್ಥಿಗಳು ಅರ್ಜಿಗಳನ್ನು https://khtigadag.ac.in/Lateralentryadmissionform.pdf ಮೂಲಕ ತೆಗೆದುಕೊಳ್ಳಬಹುದು.

ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ದೂರವಾಣಿ ಸಂ:08372-297221 ಮೊಬೈಲ್ ಸಂಖ್ಯೆ: 9449162822 ಅಥವಾ ಆಯಾ ಜಿಲ್ಲೆಯ ಜಂಟಿ, ಉಪ, ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಇವರುಗಳನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ "ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102" ಇವರಿಗೆ ಮೇ 31 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ.

ಜ್ಯೋತಿರ್ಲಿಂಗ ಸದೃಶ ಪುಲಿಗೆರೆ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವ ಇಂದಿನಿಂದ

# ನೋಡಬನ್ನಿ ಪುಲಿಗೆರೆಯ ಜಾತ್ರೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಂಪನ ತಿರುಳ್ಗನ್ನಡ ನಾಡು, ಶಿವಭಕ್ತ ಆದಯ್ಯನ ಧಾರ್ಮಿಕ ನೆಲೆವೀಡು. ಲಕ್ಷ್ಮಣರಸನ ಸಂಪದ್ಭರಿತ ಬೀಡು, ಮೇರು ಶಿಲ್ಪಗಳ ಗೂಡು ಹೀಗೆ ಗತವೈಭವಗಳ ಇತಿಹಾಸವನ್ನು ಲಕ್ಷ್ಮೇಶ್ವರ (ಪುಲಿಗೆರೆ) ಹೊಂದಿದೆ. ಜ್ಯೋತಿರ್ಲಿಂಗದಷ್ಟೇ ಪವಿತ್ರವಾದ ಈ ದೇವಸ್ಥಾನದ ಜಾತ್ರಾ ಮಹೋತ್ಸವದ ಅಂಗವಾಗಿ ಮೇ 17ರಂದು ಸಂಜೆ 7ಕ್ಕೆ ರಥ ಪೂಜೆ, ಶ್ರೀ ಲಕ್ಷ್ಮೀದೇವರ ಪೂಜೆ ಮತ್ತು ಉಡಿ ತುಂಬುವ ಕಾರ್ಯಕ್ರಮ, ಮೇ 18ರಂದು ಮಹಾರಥೋತ್ಸವ, ಮೇ 19ರ ಸಂಜೆ 5.30ಕ್ಕೆ ಕಡುಬಿನ ಕಾಳಗ ಹಾಗೂ ಮೇ 20ರ ಸಂಜೆ ಓಕಳಿ ಕಾರ್ಯಕ್ರಮ ಜರುಗಲಿದೆ.

ದೇವಸ್ಥಾನದ ಇತಿಹಾಸ: ಸಾಹಿತ್ಯ, ಶಿಲ್ಪಕಲಾ ಕ್ಷೇತ್ರದಲ್ಲಿ ಪುಲಿಗೆರೆ (ಲಕ್ಷ್ಮೇಶ್ವರ) ಸೋಮೇಶ್ವರನಿಗೆ ದೊರೆತ ಮನ್ನಣೆ ಅಪಾರ. ಕ್ರಿ.ಶ 6ನೇ ಶತಮಾನದಲ್ಲಿ ಕಲ್ಯಾಣ ಚಾಲುಕ್ಯರ ಆಳ್ವಿಕೆಗೆ ಒಳಪಟ್ಟಿದ್ದ ಪುಲಿಗೆರೆ ಮುನ್ನೂರು ಎಂಬುದೊಂದು ಪ್ರಾಂತ್ಯವಾಗಿತ್ತು. 11ನೇ ಶತಮಾನದಲ್ಲಿ ಈ ಪ್ರಾಂತ್ಯವನ್ನಾಳುತ್ತಿದ್ದ ಸರ್ವೇಶ್ವರನೆಂಬ ಮಾಂಡಲಿಕ ದೊರೆ ತನ್ನ ಮಗ ಸೋಮದೇವನ ಜನ್ಮೋತ್ಸವ ಶುಭ ಸಂದರ್ಭದಲ್ಲಿ ಈ ದೇವಸ್ಥಾನ ಕಟ್ಟಿಸಿದನೆಂಬುದು ಇತಿಹಾಸ.



ಈ ಕಾಲಾವಧಿಯಲ್ಲಿ ಸೌರಾಷ್ಟ್ರದಿಂದ ಮುತ್ತು-ರತ್ನ ವ್ಯಾಪಾರಕ್ಕಾಗಿ ಪುಲಿಗೆರೆಗೆ ಬರುತ್ತಿದ್ದ ಆದಯ್ಯನೆಂಬ ಶಿವಭಕ್ತ ತನ್ನ ಮಾವನೊಂದಿಗೆ ನಡೆದ ಮಾತುಕತೆಯ ಪ್ರತಿಷ್ಠೆಯಿಂದಾಗಿ ಸೌರಾಷ್ಟ್ರದಿಂದ ಸ್ವಯಂಭೂ ಸೋಮೇಶ್ವರನ ಮೂರ್ತಿಯನ್ನು ತಂದು ಗರ್ಭಗುಡಿಯಲ್ಲಿ ಪ್ರತಿಷ್ಠಾಪಿಸಿ ತಮ್ಮ ಭಕ್ತಿಯ ಪರಾಕಾಷ್ಠೆ ಮೆರೆದನೆಂಬ ಪ್ರತೀತವಿದೆ.

ದೇವಸ್ಥಾನದ ವೈಶಿಷ್ಟ್ಯ: ದೇವಸ್ಥಾನವು ಹೊಯ್ಸಳ ವಾಸ್ತು ಶಿಲ್ಪದಂತೆ



### ಸೂರ್ಯನ ಕಿರಣಗಳು ನೇರ ಮೂರ್ತಿಗೆ

ಪ್ರತಿವರ್ಷ ಮೇ ತಿಂಗಳ ಮಾಘಶುದ್ಧ ಬಹುಳ ನಕ್ಷತ್ರದಂದು ಅಂದರೆ ಸರಿಸುಮಾರು ಮೇ 25ರಿಂದ 30ರ ಅವಧಿಯಲ್ಲಿ ಸುರ್ಯೋದಯದ ಹೊಂಗಿರಣಗಳು ಶ್ರೀ ಸೋಮೇಶ್ವರ ಮೂರ್ತಿಯ ಮೇಲೆ ಪ್ರಕಾಶಿಸುವಂತೆ ಕಟ್ಟಿರುವುದೇ ಇಲ್ಲಿನ ತಂತ್ರಜ್ಞಾನಕ್ಕೆ ಸಾಕ್ಷಿಯಾಗಿದೆ. ಶಿಥಿಲಾವಸ್ಥೆ ತಲುಪಿದ್ದ ದೇವಸ್ಥಾನವನ್ನು ಇನ್ಫೋಸಿಸ್ ಮುಖ್ಯಸ್ಥೆ ಡಾ. ಸುಧಾ ನಾರಾಯಣಮೂರ್ತಿಯವರು 2014ರಲ್ಲಿ 5 ಕೋಟಿ ರೂ ಖರ್ಚು ಮಾಡಿ ಜೀರ್ಣೋದ್ಧಾರಗೊಳಿಸಿ ಪ್ರತಿವರ್ಷ ಪ್ರತಿಷ್ಠಾನದಿಂದ 3 ದಿನ 'ಪುಲಿಗೆರೆ ಉತ್ಸವ'ದ ಮೂಲಕ ಇಲ್ಲಿ ಸಾಂಸ್ಕೃತಿಕ, ಧಾರ್ಮಿಕ, ಪಾರಂಪರಿಕ ಹಾಗೂ ಐತಿಹಾಸಿಕ ವೈಭವ ಮರುಕಳಿಸುವಂತೆ ಮಾಡಿದ್ದಾರೆ.

ನಕ್ಷತ್ರಾಕಾರದಲ್ಲಿದೆ. ಹೊರಭಾಗದಲ್ಲಿ ಭೈರವಿ, ಶಿವ, ವಿಷ್ಣು, ನಟರಾಜ, ಗಣೇಶ, ವೀರಭದ್ರ, ವೇಣುಗೋಪಾಲ, ಯಕ್ಷ-ಯಕ್ಷಿಣಿಯರ ಶಿಲ್ಪ ಕಲಾಕೃತಿಗಳು ಆಕರ್ಷಣೀಯವಾಗಿವೆ. ಒಳಗೆ ಗರ್ಭಗೃಹ, ಅಂತರಾಳ, ನವರಂಗ ಮತ್ತು 49



ವಿಶಿಷ್ಠ ಕಂಬಗಳ ರಂಗಮಂಟಪವಿದೆ. ಪೂರ್ವ, ದಕ್ಷಿಣ ಮತ್ತು ಉತ್ತರಕ್ಕೆ ಪ್ರವೇಶ ದ್ವಾರಗಳಿವೆ. ಗರ್ಭಗೃಹದಲ್ಲಿ ಪರಮೇಶ್ವರನು ಪಾರ್ವತಿಯೊಂದಿಗೆ ನಂದಿಯ ಮೇಲೇರಿ ಹೊರಟಂತಿರುವ ದಕ್ಷಿಣ ಭಾರತದಲ್ಲಿಯೇ ಅತ್ಯಪರೂಪದ ಸ್ವಂಯಂಭೂ ಶ್ರೀ ಸೋಮೇಶ್ವರನ ವಿಗ್ರಹವಿದೆ. 21 ಎಕರೆ ವಿಸ್ತಾರವುಳ್ಳ ಪ್ರಾಂಗಣದಲ್ಲಿ ಲಜ್ಜಾಗೌರಿ ದೇವಸ್ಥಾನ, ಗಣೇಶ, ದಂಡೇಶ್ವರ, ಚಂದ್ರಮೌಳೇಶ್ವರ, ತ್ರಿಕೂಟಾಚಲ, ವೀರಭದ್ರೇಶ್ವರ,



ಮಲ್ಲಿಕಾರ್ಜುನ ದೇವಸ್ಥಾನ ಮತ್ತು ದೇವ ಮಂಟಪಗಳನ್ನೊಳಗೊಂಡ ದೇವಾಲಯಗಳ ಸಮುಚ್ಚಯವೇ ಇದೆ. ದೇವಸ್ಥಾನದ ಪಶ್ಚಿಮಕ್ಕೆ ಗೌರಾಂಬಿಕೆ ಎಂಬ ಮಹಿಳೆಯಿಂದ ನಿರ್ಮಿಸಲ್ಪಟ್ಟ ಸುಂದರವಾದ ಕಲ್ಯಾಣಿ ಇದೆ.

## ಕಷ್ಟಪಟ್ಟು ಓದಿದರೆ ಫಲವಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಭ್ಯಾಸ ಮಾಡುವ ವಯಸ್ಸಿನಲ್ಲಿ ಕಷ್ಟಪಟ್ಟು ಓದಿದರೆ ಯಶಸ್ಸು ಖಚಿತ ಎಂದು ಗದಗ ಜಿಲ್ಲಾ ಬಿಜೆಪಿ ವಕ್ತಾರ, ಹಿರಿಯ ನ್ಯಾಯವಾದಿ ಎಂ.ಎಂ. ಹಿರೇಮಠ ಅಭಿಪ್ರಾಯಪಟ್ಟರು.

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ 4ನೇ ರ್‍ಯಾಂಕ್ ಹಾಗೂ ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಸಮೃದ್ಧಿ ಶಿದ್ಲಿಂಗ ಅವರ ಮನೆಗೆ ಭೇಟಿ ನೀಡಿ ಶುಭ ಕೋರಿ ಮಾತನಾಡುತ್ತ, ವಿದ್ಯಾರ್ಥಿಗಳು ಕಷ್ಟಪಟ್ಟು ಓದಿ ತಮ್ಮ ತಂದೆ-ತಾಯಿಗಳಿಗೆ ಕೀರ್ತಿ ತಂದಾಗ ಅವರಷ್ಟು ಆನಂದ ಪಡುವವರು ಯಾರೂ ಇಲ್ಲ. ಪರೀಕ್ಷೆಯ ಸಂದರ್ಭದಲ್ಲಿ ಸಮಯವನ್ನು ವ್ಯರ್ಥ ಮಾಡದೇ ಸರಿಯಾಗಿ ಮನಸ್ಸಿಟ್ಟು ಓದಿದಾಗ ಪರೀಕ್ಷೆಯಲ್ಲಿ ಯಶಸ್ಸು ಸಿಗುವದು ಖಂಡಿತ. ಸಮೃದ್ಧಿ ಶಿದ್ಲಿಂಗ್‌ರವರು ಯಾವುದೇ ಕೋಚಿಂಗ್ ತೆಗೆದುಕೊಳ್ಳದೇ ಅಭ್ಯಾಸ ಮಾಡಿ ಶಾಲೆಗೆ, ಊರಿಗೆ ಕೀರ್ತಿ ತಂದಿದ್ದು, ಮುಂದೆಯೂ ಕೂಡಾ ಅವಳ ಜೀವನ ಉತ್ತುಂಗಕ್ಕೆ ಏರಿ ಯಶವನ್ನು ಗಳಿಸಲಿ ಎಂದರು.

ಈ ಸಂದರ್ಭದಲ್ಲಿ ಕಲ್ಪನಾ ಹಿರೇಮಠ ವಕೀಲರು, ಶಿ.ಡಿ. ಮೇತ್ರಾಣಿ ವಕೀಲರು, ಮಾಡೆಲ್ ಹೈಸ್ಕೂಲ್‌ನ ನಿವೃತ್ತ ಶಿಕ್ಷಕಿ ಮೇತ್ರಾಣಿ, ಶಿದ್ಲಿಂಗ ಹಾಗೂ ಮೇತ್ರಾಣಿ ಕುಟುಂಬದ ಸದಸ್ಯರು ಹಾಜರಿದ್ದರು.

## ಬಸವೇಶ್ವರ ಸಿಬಿಎಸ್‌ಇ ಶಾಲೆಗೆ ಉತ್ತಮ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಬಸವೇಶ್ವರ ಸಿಬಿಎಸ್‌ಇ ಶಾಲೆಯ ವಿದ್ಯಾರ್ಥಿಗಳು 2023-24ನೇ ಸಾಲಿನ 10ನೇ ತರಗತಿಯ ವಾರ್ಷಿಕ ಪರೀಕ್ಷೆಯಲ್ಲಿ ಸತತ 6ನೇ ಬಾರಿಗೆ ಶೇ. 100ರಷ್ಟು ಫಲಿತಾಂಶ ದಾಖಲಿಸಿದ್ದಾರೆ. ಪರೀಕ್ಷೆಗೆ ಹಾಜರಾಗಿದ್ದ ಒಟ್ಟು 38 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, 4 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ನಲ್ಲಿ, 23 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ, 8 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ, 3 ವಿದ್ಯಾರ್ಥಿಗಳು ತೃತೀಯ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ.

ಎಸ್. ರಂಜಿತಾ (ಶೇ.91.2) ಪ್ರಥಮ, ಶ್ವೇತಾ ಬಳಗೋಡ (ಶೇ.90.8) ದ್ವಿತೀಯ, ಮೃತ್ಯುಂಜಯ ದಿಂಡೂರ (89.2) ತೃತೀಯ, ಸ್ನೇಹಾ ಸೂಬಗಿನ ಶೇ.87, ವಿಜಯಕುಮಾರ ಪೂಜಾರ ಶೇ. 81.06, ಸಹನಾ ರಂಗಣ್ಣವರ ಶೇ.80.06, ಪ್ರಜ್ವಲ್ ವಸ್ತ್ರದ ಶೇ.79.2 ಅಂಕ ಗಳಿಸಿದ್ದಾರೆಂದು ಪ್ರಾಚಾರ್ಯ ಬಿ.ಎಚ್. ಬಂಡಿಹಾಳ ತಿಳಿಸಿದ್ದಾರೆ.

ಈ ಪರೀಕ್ಷೆಯಲ್ಲಿ ಸಾಧನೆ ಮಾಡಿದ ಎಲ್ಲಾ ವಿದ್ಯಾರ್ಥಿಗಳಿಗೆ ಶಾಲಾ ಸಂಸ್ಥೆಯ ಅಧ್ಯಕ್ಷರಾದ ಪರಮ ಪೂಜ್ಯ ಮುಪ್ಪಿನ ಬಸವಲಿಂಗ ಸ್ವಾಮೀಜಿಯುವರು ಶುಭ ಹಾರೈಸಿದ್ದಾರೆ. ಚೇರಮನ್ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಆಡಳಿತ ಮಂಡಳಿಯ ಸದಸ್ಯರಾದ ಡಾ. ಜಿ.ಕೆ. ಕಾಳೆ, ವಿ.ಬಿ. ಸೋಮನಕಟ್ಟಿಮಠ, ಸದಾಶಿವ ಕರಡಿ, ಜಿ.ಪಿ. ಕುಲಕರ್ಣಿ, ಪ್ರಾಚಾರ್ಯರು ಹಾಗೂ ಸಿಬ್ಬಂದಿ ಬಳಗದವರು ಅಭಿನಂದಿಸಿದ್ದಾರೆ.

ಇಂಧನ ಸಾಮರ್ಥ್ಯ ಪಂಪ್‌ಸೆಟ್, ನೀರು ಸಂರಕ್ಷಣೆ ಕುರಿತು ಜಾಗೃತಿ-ತರಬೇತಿ ಕಾರ್ಯಕ್ರಮ

## ಮಳೆ ನೀರು ಇಂಗಿಸಲು ಮುಂದಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಐ.ಸಿ.ಎ.ಆರ್.ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ ಹಾಗೂ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಹುಲಕೋಟಿಯ ಐ.ಸಿ.ಎ.ಆರ್‌ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಇಂಧನ ಸಾಮರ್ಥ್ಯ ಪಂಪ್‌ಸೆಟ್‌ಗಳು ಹಾಗೂ ನೀರು ಸಂರಕ್ಷಣೆ ಕುರಿತು ಒಂದು ದಿನದ ಜಾಗೃತಿ ಮತ್ತು ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಧಾರವಾಡದ ಅಸಿಸ್ಟಂಟ್ ಜನರಲ್ ಮ್ಯಾನೇಜರ್ ಸವಿತಾ ಮೇಟಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ನೀರಾವರಿ ಇರುವ ರೈತರು ಡೀಸೆಲ್ ಪಂಪುಗಳನ್ನು ವರ್ಜಿಸಿ ನವೀಕರಿಸಬಹುದಾದ ಇಂಧನ ಮೂಲಗಳಾದ ಸೌರಶಕ್ತಿ ಹಾಗೂ ಪವನಶಕ್ತಿಯಿಂದ ಚಲಿಸುವ ಪಂಪುಗಳನ್ನು ಅಳವಡಿಸಿಕೊಂಡು ಸ್ವಾವಲಂಬಿಗಳಾಗಬೇಕು. ಐ.ಎಸ್.ಐ ಚಿಹ್ನೆ ಇರುವ 5 ಸ್ಟಾರ್‌ಗಳುಳ್ಳ ವಿದ್ಯುತ್ ಪಂಪುಗಳನ್ನೇ ಖರೀದಿಸಬೇಕು ಎಂದು ಕರೆ



ನೀಡಿದರು.

ಕೃಷಿ ವಿಜ್ಞಾನ ಕೇಂದ್ರದ ನಿವೃತ್ತ ವಿಜ್ಞಾನಿ ಎಸ್.ಕೆ. ಮುದ್ಲಾಪುರ ಮಾತನಾಡಿ, ಮುಂದಿನ ಪೀಳಿಗೆಗೆ ನೀರು ಉಳಿಸಲು ನಾವು ಇಂದಿನಿಂದಲೇ ನೀರಿನ ಸಂರಕ್ಷಣೆ ಮಾಡಬೇಕು. ಮಳೆಯಾಶ್ರಿತ ರೈತ ಬಾಂಧವರು ಮಳೆ ನೀರು ಜಮೀನಿನಲ್ಲಿ ನಿಲ್ಲಿಸಿ ಇಂಗುವಂತೆ ಮಾಡಲು ಕಾರ್ಯಯೋಜನೆ ಕೈಗೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದ ಕೃಷಿ ಇಂಜನಿಯರಿಂಗ್ ವಿಭಾಗದ ವಿಜ್ಞಾನಿ ಡಾ. ವಿನಾಯಕ ನಿರಂಜನ್

ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ವ್ಹಿ.ಮಂಕಣಿ ಮಾತನಾಡಿ, ನೀರಾವರಿ ವಿದ್ಯುತ್ ಪಂಪುಗಳನ್ನು ಆಯ್ಕೆ ಮಾಡುವಾಗ ರೈತರು ಅಸಡ್ಡೆ ತೋರದೆ, ಹೆಚ್ಚು ದಕ್ಷತೆಯುಳ್ಳ ಹಾಗೂ ಕಡಿಮೆ ವಿದ್ಯುತ್ ಬಳಕೆ ಮಾಡುವ ಪಂಪುಗಳನ್ನು ಅಳವಡಿಸಬೇಕು ಎಂದು ಸಲಹೆ ನೀಡಿದರು.

ರೈತರಿಗೆ ತರಬೇತಿ ಕಾರ್ಯಕ್ರಮದ ಧ್ಯೇಯೋದ್ದೇಶಗಳನ್ನು ತಿಳಿಸಿದರು. ಎನ್.ಎಚ್. ಭಂಡಿ ಇವರು ವಂದಿಸಿದರು. ಉದ್ಘಾಟನಾ ಸಮಾರಂಭದ ನಂತರ ತಾಂತ್ರಿಕ ಅಧಿವೇಶನಗಳನ್ನು ಹಮ್ಮಿಕೊಳ್ಳಲಾಯಿತು. ಸವಿತಾ ಮೇಟಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯ ವಿವಿಧ ಕಾರ್ಯಕ್ರಮಗಳ ಕುರಿತು ವಿವರಿಸಿದರು. ವಿಜ್ಞಾನಿಗಳಾದ ಡಾ. ವಿನಾಯಕ ನಿರಂಜನ್, ಎನ್.ಎಚ್. ಭಂಡಿ ಹಾಗೂ ಹೇಮಾವತಿ ಹಿರೇಗೌಡರ್ ತರಬೇತಿಗೆ ಸಂಭಂಧಿಸಿದಂತೆ ವಿವಿಧ ವಿಷಯಗಳನ್ನು ರೈತರಿಗೆ ವಿವರಿಸಿದರು. ತರಬೇತಿ ಕಾರ್ಯಕ್ರಮದಲ್ಲಿ 52ಕ್ಕೂ ಹೆಚ್ಚು ರೈತರು ಹಾಗೂ ಪಂಪ್‌ಸೆಟ್ ತಂತ್ರಜ್ಞರು ಭಾಗವಹಿಸಿದ್ದರು.

## ಬೆಟಗೇರಿ ಪೊಲೀಸರಿಂದ ಸರಗಳ್ಳನ ಬಂಧನ



■ವಿಜಯಸಾಕ್ಷಿ ಸುದ್ದಿ, ಗದಗ

ನಗದರಲ್ಲಿ ಸರ ಕಳ್ಳತನ ಮಾಡುತ್ತಿದ್ದ ಆರೋಪಿತನನ್ನು ಬಂಧಿಸಿ, ಆತನಿಂದ ಬಂಗಾರದ ಆಭರಣ ಸೇರಿದಂತೆ ಒಟ್ಟು 1 ಲಕ್ಷ 50 ಸಾವಿರ ರೂ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಗದಗ ಪೊಲೀಸ್ ಅಧೀಕ್ಷಕ ಬಿ.ಎಸ್. ನೇಮಗೌಡ, ಗದಗ ಪೊಲೀಸ್ ಹೆಚ್ಚುವರಿ ಅಧೀಕ್ಷಕ ಎಂ.ಬಿ. ಸುಂಕದ, ಗದಗ ಉಪ ವಿಭಾಗದ ಉಪ ಅಧೀಕ್ಷಕ ಜೆ.ಎಚ್. ಇನಾಮದಾರ ಮಾರ್ಗದರ್ಶನದಲ್ಲಿ ಬೆಟಗೇರಿ ವೃತ್ತ ಸಿಪಿಐ ಧೀರಜ್ ಶಿಂಧೆ, ಮುಳಗುಂದ ಸಿಪಿಐ ಸಂಗಮೇಶ ಶಿವಯೋಗಿ ನೇತೃತ್ವದಲ್ಲಿ, ಬೆಟಗೇರಿ ಠಾಣಾ ಪಿಎಸ್‌ಐ ನೂರಜಾನ ಸಾಬರ, ಎಸ್.ಬಿ. ಜಾಂಬೋಟಿ, ಬಿ.ಎಫ್. ಯರಗುಪ್ಪಿ, ಎಸ್.ಎ. ಗುಡ್ಡಮಠ, ಐ.ಎ. ಮಿರ್ಜಾ, ಪಿ.ಆರ್. ರಾಠೋಡ, ಎಂ.ಎಸ್. ಗಾಣಿಗೇರ, ಎಸ್.ಡಿ. ಬಳ್ಳಾರಿ, ಎಂ.ಎಫ್. ಅಸೂಟಿ, ಸಿ.ಎನ್. ಮಾದರ, ಪಿ.ಎಸ್. ದೊಡ್ಡಮನಿ, ಅಶೋಕ ಗದಗ, ನಾಗರಾಜ ಭರಡಿ, ಗುರು ಬೂದಿಹಾಳ ಕಾರ್ಯಾಚರಣೆ ಕೈಗೊಂಡಿದ್ದರು.

## ಶ್ರವಣ ನ್ಯೂನತೆಯುಳ್ಳ ಮಕ್ಕಳ ಸಾಧನೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಕಿವುಡ ಮಕ್ಕಳ ವಸತಿಯುತ ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಿದ್ಯಾರ್ಥಿಗಳು 2023-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 90ರಷ್ಟು ಫಲಿತಾಂಶ ನೀಡಿ, ಅತ್ಯುತ್ತಮ ಸಾಧನೆಗೈಯುವ ಮೂಲಕ ಸಂಸ್ಥೆಗೆ ಹಾಗೂ ಶಾಲೆಗೆ ಕೀರ್ತಿಯನ್ನು ತಂದಿದ್ದಾರೆ.

ಪರೀಕ್ಷೆಗೆ ಹಾಜರಾಗಿದ್ದ 10 ವಿದ್ಯಾರ್ಥಿಗಳಲ್ಲಿ 9 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಒಟ್ಟಾರೆ ಫಲಿತಾಂಶ ಶೇ90ರಷ್ಟು ಆಗಿದೆ ಎಂದು ಶಾಲಾ ಮುಖ್ಯ ಶಿಕ್ಷಕ ಬಸಪ್ಪ ಸಂಗಳದ ಪ್ರಕಟಣೆಗೆ ತಿಳಿಸಿದ್ದಾರೆ.

ನಿರ್ಮಲಾ ಬಸವರಾಜ ಸೋಮಗೊಂಡ ಶೇ. 65.64 ಅಂಕಗಳೊಂದಿಗೆ ಪ್ರಥಮ ಸ್ಥಾನ, ಮಕ್ತುಮಸಾಬ ಹಳೆಮಸೂತಿ ಶೇ. 64.94 ಅಂಕದೊಂದಿಗೆ ದ್ವಿತೀಯ ಸ್ಥಾನ, ಕುಬೇರ ಮಾಳೊತ್ತರ ಶೇ. 63.05 ಅಂಕದೊಂದಿಗೆ ತೃತೀಯ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ಸಾಧನೆಗೈದ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷರಾದ ಹಾಲಕೆರೆಯ ಮುಪ್ಪಿನ ಬಸವಲಿಂಗ ಮಹಾಸ್ವಾಮೀಜಿ, ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಶಾಲೆಯ ಚೇರಮನ್ ಶರಣಪ್ಪ ಕೆ. ರೇವಡಿಯವರ, ಆಡಳಿತ ಮಂಡಳಿಯ ಸರ್ವ ಸದಸ್ಯರು, ಮುಖ್ಯೋಪಾಧ್ಯಾಯರು, ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

## ಬೆಳೆ ಪರಿಹಾರದ ಹಣ ಪಾವತಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೈತರಿಗೆ ಕಳೆದ ವರ್ಷ ತುಂಬಿದ ಬೆಳೆವಿಮಾ ಹಣ ಇದುವರೆಗೂ ಸಂದಾಯವಾಗಿಲ್ಲ. 7 ದಿನದ ಒಳಗೆ ಜಿಲ್ಲೆಯ ಎಲ್ಲ ರೈತರ ಖಾತೆಗೆ ಬೆಳೆ ಪರಿಹಾರದ ಮತ್ತು ವಿಮಾ ಪರಿಹಾರದ ಹಣ ಜಮಾ ಮಾಡಬೇಕು ಎಂದು ರೈತ ಹಿತಾಭಿವೃದ್ಧಿ ಸಂಘದ ಪದಾಧಿಕಾರಿಗಳು ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

ಈ ಸಂದರ್ಭದಲ್ಲಿ ರೈತ ಹಿತಾಭಿವೃದ್ಧಿ ಸಂಘದ ಗದಗ ಜಿಲ್ಲಾಧ್ಯಕ್ಷ ಕರಬಸಯ್ಯ ನಾಲ್ವತ್ವಾಡಮಠ ಮಾತನಾಡಿ, ಪಕ್ಕದ ಧಾರವಾಡ, ಹಾವೇರಿ, ಬಾಗಲಕೋಟೆ, ಕೊಪ್ಪಳ ಜಿಲ್ಲೆಯ ರೈತರಿಗೆ ಬೆಳೆ ವಿಮಾ ಪರಿಹಾರದ ಹಣವು ಜಮೆ ಆಗಿ ತಿಂಗಳಾದರೂ ನಮ್ಮ ಜಿಲ್ಲೆಯ ರೈತರಿಗೆ ಹಣ ಜಮಾ ಆಗಿಲ್ಲ. ಕಾರಣ ಕೇಳಿದರೆ ಎಫ್‌ಐಡಿ ಆಗಿಲ್ಲ, ಆಧಾರ್ ಕಾರ್ಡ್ ಸರಿಯಿಲ್ಲ ಎಂದು ಸುಳ್ಳು ಸಬೂಬು ಹೇಳುತ್ತಿದ್ದು, ರೈತರು ಸರ್ಕಾರಿ ಕಚೇರಿಗಳಿಗೆ ಅಲೆದಾಡುವ ಪರಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ರೈತ ಹಿತಾಭಿವೃದ್ಧಿ ಸಂಘದ ಕಾರ್ಯದರ್ಶಿ ಪರಮೇಶ್ವರಪ್ಪ ಜಂತ್ಲಿ, ರೈತ ಮುಖಂಡರಾದ ಬಸವರಾಜ ಕವಳಿಕಾಯಿ, ವಿ.ಎಚ್. ದೇಸಾಯಿಗೌಡ್ರ, ಬಸಪ್ಪ ಕಲಬಂಡಿ, ವಿರೂಪಾಕ್ಷಪ್ಪ ಅಕ್ಕಿ, ಈಶ್ವರಪ್ಪ ಗುಜಮಾಗಡಿ, ಮೋಹನ ಇಮರಾಪೂರ, ಮಲ್ಲಪ್ಪ ಬಳ್ಳಾರಿ, ಬಸವರಾಜ ಹುಬ್ಬಳ್ಳಿ, ನರಸಪ್ಪ ತುಕ್ಕಪ್ಪನವರ, ವಿರುಪಾಕ್ಷಪ್ಪ ಹೆಬ್ಬಳ್ಳಿ, ಕಳಕಪ್ಪ ರೇವಡಿ, ಪರಪ್ಪ ಕಮತರ, ಫಕ್ಕಿರಗೌಡ ಪಾಟೀಲ, ಮಂಜುನಾಥ ಕೋಳಿವಾಡ, ಸತೀಶ ಗಿಡ್ಡಹನಮಣ್ಣವರ, ಮುತ್ತಪ್ಪ ಜಡಿ, ಉಮೇಶ ಲಿಂಗರಡ್ಡಿ, ಬಸವರಾಜ ಮೊರಬದ, ಇಮಾಮ ಹುಸೇನ್ ಚಿನ್ನೂರ, ರುದ್ರಯ್ಯ ಹಿರೇಮಠ, ಈರಣ್ಣ ಗಡಗಿ, ವಿರುಪಾಕ್ಷಪ್ಪ ಕಳಸದ, ಮಂಜುನಾಥ ಹಿತ್ತಲಮನಿ, ಅಶೋಕ ಪೋರ್ಬಿ, ಮಂಜುನಾಥ ಕುಡಗಿ ಸೇರಿದಂತೆ ಇತರರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka